ವಿಜಯಪುರ | ಸಂಪುಟ 02 | ಸಂಚಿಕೆ 108 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜೂನ್ 18, 2024

“ಮೂರು ವರ್ಷದ ತಮ್ಮ ಅಧಿಕಾರಾವಧಿಯಲ್ಲಿ ಬಾಲ ಮಂದಿರದ ನಿರ್ಗತಿಕ ಮಕ್ಕಳ ಮನಸ್ಸು ಅರಳಿಸುವ ಜೊತೆ ಬಾವ, ಸಂಸ್ಕಾರ, ಸಂಸ್ಕೃತಿ ಕಲಿಸಿ ಸಮಾಜಕ್ಕೆ ಬೆಳಕಾಗುವಂತೆ ಹೊಸ ಭಾಷ್ಯ ಬರೆಯುವ ವಿಶ್ವಾಸ ನನಗಿದೆ.”



– ಸಂಗಮೇಶ ಬಬಲೇಶ್ವರ

ನೂತನ ಅಧ್ಯಕ್ಷರು, ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಧಾರವಾಡ

## ಬೆಂಗಳೂರಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ

# ಪೆಟ್ರೋಲ್-ಡೀಸೆಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ!

ಬೆಂಗಳೂರು: ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದ್ದು, ರಾಜ್ಯದಾದ್ಯಂತ ಸೋಮವಾರ ಪ್ರತಿಭಟನೆ ನಡೆಸಿತು.

ಸೋಮವಾರ ಬೆಂಗಳೂರು, ಮಂಗಳೂರು, ಮಂಡ್ಯ ಸೇರಿ ರಾಜ್ಯದ ಹಲವು ಕಡೆಗಳಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ಕಾರ್ಯಕರ್ತರು ಬೀದಿಗಿಳಿದು ಪ್ರತಿಭಟನೆ ನಡೆಸಿದರು..

ಬೆಂಗಳೂರಿನ ಫ್ರೀಡಂಪಾರ್ಕ್ ನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಶಾಸಕರಾದ ಭೈರತಿ ಬಸವರಾಜ್ ಎಂಎಲ್ ಸಿ ರವಿ ಕುಮಾರ್ ಸಿ.ಟಿ ರವಿ ಭಾಗಿಯಾಗಿದ್ದರು. ಪ್ರತಿಭಟನೆ ವೇಳೆ ನಾಯಕರು ಸರ್ಕಾರದ ವಿರುದ್ಧ ದಿಕ್ಕಾರ ಕೂಗಿಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ವೇಳೆ ಮಾತನಾಡಿದ ವಿಜಯೇಂದ್ರ ಅವರು, ರಾಜ್. ಸರ್ಕಾರದ ಜನವಿರೋಧಿ ನಿಲುವಿನ ವಿರುದ್ಧ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಿಂದ ಎಲ್ಲಾ ಕ್ಷೇತ್ರಗಳ ಮೇಲೆ ನೇರ ಪರಿಣಾಮ ಬೀರಲಿದೆ. ಐದು ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರ ದೊಡ್ಡ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಇದರಿಂದ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನನೆಗುದಿಗೆ ಬಿದ್ದಿವೆ. ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿದರೆ ಸಾರ್ವಜನಿಕರಿಂದ ಆಕ್ರೋಶಕ್ಕೆ ಕಾರಣವಾಗುತ್ತದೆ ಎಂದು ಅರಿತ ಸರ್ಕಾರ, ಈ ಗ್ಯಾರಂಟಿ ಯೋಜನೆಗಳ ಮುಂದುವ-ರಿಸುವ ಸಲುವಾಗಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಹೆಚ್ಚಿಸಿದೆ ಎಂದು ಆರೋಪಿಸಿದರು.


ಎರಡು ದಿನದ ಹಿಂದೆ ರಾಜ್ಯ ಸರ್ಕಾರ ಪೆಟ್ರೋಲ್ ದರ 3 ರೂ. ಡೀಸೆಲ್ ದರ 3.50 ರೂ. ಹೆಚ್ಚಳ ಮಾಡಿ ಆದೇಶ ಹೊರಡಿಸಿತ್ತು. ಈ ದರ ಏರಿಕೆ ನಡೆಗೆ ರಾಜ್ಯಾದ್ಯಂತ ಆಕ್ರೋಶ ವ್ಯಕ್ತವಾಗಿದೆ.




### ರಾಜ ನುಡಿ

ಸಮಯವನು ಕೊಂದಾಗ ಅವಕಾಶಗಳು ಸಾಯುತ್ತವೆ. ಭಾವನೆಗಳನು ಕೊಂದಾಗ ಬಂಧಗಳು ಬಿಕ್ಕುತ್ತವೆ. ಸಮಯ ಮತ್ತು ಭಾವನೆಗಳ ಮೇಲೆಯೇ ಬದುಕು ಜೀವಿಸುತ್ತಿರುತ್ತದೆ. ಜೀವಂತಿಕೆಗೆ ಎರಡನ್ನೂ ಗೌರವಿಸಿ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 399

*ಅಂಗದ ಮೇಲೆ ಲಿಂಗವಿದ್ದವರೆಲ್ಲರು ಸರಿಗಾಣಬೇಕೆಂಬರು,*
*ಲಿಂಗಲಾಂಛನಧಾರಿಗಳೆಲ್ಲ, ಶರಣಂಗೆ ಸರಿಯೆ?*

*ಶರಣರ ಸಂಗ ಎಂತಿಪ್ಪುದೆಂದರೆ,*
*ಪರಮಜ್ಞಾನವೆಂಬ ಉರಿಯನೆ ಉಟ್ಟು,*
*ಉರಿಯನೆ ತೊಟ್ಟು,*
*ಉರಿಯನೆ ಉಂಡು, ಉರಿಯನೆ ಹಾಸಿ,*
*ಉರಿಯನೆ ಹೊದ್ದು,*
*ನಿರವಯಲಾದ ಶರಣಂಗೆ ನರರುಗಳು ಸರಿ ಎನ್ನಬಹುದೆ?*
*ಹರಿಗೆ ಕರಿ ಸರಿಯೇ? ಉರಗಗೆ ಒಳ್ಳೆ ಸರಿಯೇ?*
*ಮರುಗಕ್ಕೆ ಗರುಗ ಸರಿಯೇ?*
*ಇಂತೀ ನಿರ್ವಯಲಾದ ಶರಣಂಗೆ ಮರ್ತ್ಯದ ನರಗುರಿಗಳು ಸರಿ ಎಂದರೆ,ನಾಯಕ ನರಕದಲ್ಲಿಕ್ಕುವ, ನಮ್ಮ ಬಸವಪ್ರಿಯ ಕೂಡಲಚೆನ್ನಬಸವಣ್ಣ.*

12ನೇ ಶತಮಾನದ ಅಂದಿನ ಮಹಾಮನೆ ಪ್ರವೇಶಕ್ಕೆ ಇರುವ ಪ್ರಮುಖ ಮಾನದಂಡಗಳಲ್ಲಿ ಇಷ್ಟಲಿಂಗಧಾರಣೆಯು ಒಂದಾಗಿತ್ತು. ಆದರೆ ಇಲ್ಲಿ ಹಡಪದ ಅಪ್ಪಣ್ಣನವರು ಕೇವಲ ಅಂಗದ ಮೇಲೆ ಲಿಂಗ ಧರಿಸಿದವರೆಲ್ಲ ಶರಣನಾಗಲು ಸಾಧ್ಯವಿಲ್ಲವೆಂದು (ಲಿಂಗಲಾಂಛನಧಾ-ರಿಗಳೆಲ್ಲ, ಶರಣಂಗೆ ಸರಿಯೆ?) ಅನೇಕ ಉದಾಹರಣೆಗಳೊಂದಿಗೆ ಸ್ಪಷ್ಟೀಕ-ರಿಸಿದ್ದಾರೆ.ಶರಣ ಮತ್ತು ಭವಿಗಳ ಮದ್ಯದ ವ್ಯತ್ಯಾಸವನ್ನು ತಿಳಿಸುತ್ತಾ ದೊಡ್ಡ ಜೀವಿಗಳನ್ನು (ಕರಿ=ಆನೆ) ಸೃಷ್ಟಿಸಿದ ದೇವನಿಗೆ ಆ ಜೀವಿಗಳು ಸರಿಸಮವಾಗಲು ಸಾಧ್ಯವೇ ? (ಹರಿಗೆ ಕರಿ ಸರಿಯೇ?) ವಿಷ ಹೊಂದಿದ ಉದ್ದನೆಯ ಹಾವಿಗೆ ವಿಷ ಹಾಗಲಕಾಯಿ ಸಮವಾಗುವುದೇ ?( ಉರಗಗೆ ಒಳ್ಳೆ ಸರಿಯೇ?), ಸುವಾಸನೆ ಬೀರುವ ಪಚ್ಚೆ ಮರುಗದ ಸಸ್ಯಕ್ಕೆ ವಾಸನೆ ರಹಿತ ಕಸವು ಸಮವಾ ಗುವುದೇ? (ಮರುಗಕ್ಕೆ ಗರುಗ ಸರಿಯೇ?) ಎಂದು ಪ್ರಶ್ನಿಸುತ್ತಾ ಕೇವಲ ತೋರಿಕೆಯಲ್ಲಿ ಒಂದೇ ರೀತಿ ಕಾಣುವ ಎರಡು ವಸ್ತುಗಳು ಅಂತರಂಗದಲ್ಲಿ ಭಿನ್ನವಾಗಿದ್ದರೆ ಸಮ ಆಗುವು ದಿಲ್ಲ ಎಂಬ ಸತ್ಯವನ್ನು ಹೇಳುತ್ತಾ ಬಾಹ್ಯ ಮತ್ತು ಅಂತರಂಗದಲ್ಲಿ ಲಿಂಗವನ್ನು ಧರಿಸಿದ ಶರಣರ ಸಂಗವೆಂದರೆ ಪರಮಜ್ಞಾನವೆಂಬ ಉರಿಯನೆ ಉಟ್ಟು, ಉರಿಯನೆ ತೊಟ್ಟು, ಉರಿಯನೆ ಉಂಡು, ಉರಿಯನೆ ಹಾಸಿ, ಉರಿಯನೆ ಹೊದ್ದು, ನಿರವಯಲಾದ ಅನು ಭಾವ ಪ್ರಾಪ್ತಿಯಾಗುತ್ತದೆ ಇಲ್ಲಿ ಗುರು ಎನ್ನುವುದು ಬೆಳಕಿನ ಸಂಕೇ ತ ಬೆಳಕು ದೇವರ ಪ್ರತಿರೂಪ ಹಾಗಾಗಿ ಅಂತರಂಗದ ಲಿಂಗಧಾರಿ ಗಾದ ಶರಣ-ರೆಲ್ಲರೂ ಮಹಾಲಿಂದ ಪ್ರತಿರೂಪವೇ ಎಂದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಬೆಲೆ ಏರಿಕೆ ಸಮರ್ಥಿಸಿಕೊಂಡ ಸಚಿವ ಎಂ.ಬಿ. ಪಾಟೀಲ



ವಿಜಯಪುರ: ಆದಾಯ ಕಡಿಮೆ ಆಗ್ತಿದೆ. ಅಭಿವೃದ್ಧಿ, ಗ್ಯಾರಂಟಿ ಯೋಜನೆಗೆ ಹಣ ಬೇಕಲ್ಲವೇ ಅದಕ್ಕಾಗಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಲಾಗಿದೆ ಎಂದು ಸಚಿವ ಎಂ.ಬಿ. ಪಾಟೀಲ್ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಬೇರೆ ರಾಜ್ಯಗಳನ್ನು ಹೋಲಿಕೆ ಮಾಡಿದರೆ ನಮ್ಮ ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಕಡಿಮೆ ಇದೆ. ತಮಿಳುನಾಡು ಸೇರಿದಂತೆ ಇತರೆ ರಾಜ್ಯಗಳಿಗೆ ಹೋಲಿಸಿದರೆ ಕಡಿಮೆಯಿದೆ ಯಾರ ಮೇಲೂ ಅನಾವಶ್ಯಕವಾಗಿ ಹೊರೆ ಹಾಕುತ್ತಿಲ್ಲ ಎಂದರು. ಮೋದಿಯವರು ಬಂದ ಮೇಲೆ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆಯಾಗಿದೆ ಅದನ್ನ ಯಾಕೆ ನೀವು ಕೇಳೋದಿಲ್ಲ. ಕೇಂದ್ರದಲ್ಲಿ ನಮ್ಮ ಸರ್ಕಾರ ಇದ್ದಾಗ 60 ರೂಪಾಯಿ ಪೆಟ್ರೋಲ್ ಇತ್ತು ಈಗ 105 ರೂಪಾಯಿ. ಉಳಿದ ರಾಜ್ಯಗಳನ್ನು ಹೋಲಿಕೆ ಮಾಡಿ ನೋಡಿ ನಮ್ಮ ರಾಜ್ಯದಲ್ಲಿ ಕಡಿಮೆ ಇದೆ ಎಂದರು.

ನೆರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ಪೆಟ್ರೋಲ್, ಡೀಸೆಲ್ ದರ ಕಡಿಮೆಯಿದೆ. ತಮಿಳುನಾಡು ಹಾಗೂ ಇತರ ರಾಜ್ಯಗಳಲ್ಲಿ 5 ರಿಂದ 10 ರೂಪಾಯಿ ಹೆಚ್ಚಿಗೆ ದರ ಇದೆ. ಇತರ ರಾಜ್ಯಗಳಿಗಿಂತ ಪೆಟ್ರೋಲ್ ಡೀಸೆಲ್ ದರ ಕಡಿಮೆ ಮಾಡಿ ಬೆಲೆ ಏರಿಕೆ ಮಾಡಲಾಗಿದೆ. ಸರ್ಕಾರಕ್ಕೆ ಆದಾಯ ಕಡಿಮೆಯಾಗುತ್ತಿದೆ ಅಭಿವೃದ್ಧಿಗೆ ಗ್ಯಾರಂಟಿ ಯೋಜನೆಗೆ ಹಣ ಬೇಕಲ್ಲ. ಹೀಗಾಗಿ ಅನವಶ್ಯಕವಾಗಿ ಹೆಚ್ಚಿಗೆ ಬೆಲೆ ಏರಿಕೆ ಮಾಡಲಾಗಿದೆ ಎಂದರು.

### ಕರ್ನಾಟಕ ಬಾಲ ವಿಕಾಸ ಅಕಾಡೆಮಿ ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರಿಗೆ 'ಉದಯರಶ್ಮಿ' ಬಳಗದ ಪರವಾಗಿ ಸನ್ಮಾನ

## ಬಾಲ ವಿಕಾಸ ಅಕಾಡೆಮಿಗೆ ಹೊಸ ಸ್ವರೂಪ ನೀಡುವ ಕನಸು :ಬಬಲೇಶ್ವರ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರನ್ನು 'ಉದಯರಶ್ಮಿ' ಪತ್ರಿಕಾ ಬಳಗದ ಪರವಾಗಿ ಸಂಪಾದಕ ಇಂದುಶೇಖರ ಮಣೂರ ಸೋಮವಾರ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಂಪಾದಕರೊಂದಿಗೆ ಹಲವು ವಿಚಾರಗಳನ್ನು ಹಂಚಿಕೊಂಡ ಸಂಗಮೇಶ ಬಬಲೇಶ್ವರ ಅವರು, ಮೂರು ವರ್ಷದ ತಮ್ಮ ಅಧಿಕಾರಾವಧಿಯಲ್ಲಿ ಬಾಲ ಮಂದಿರದ ನಿರ್ಗತಿಕ ಮಕ್ಕಳ ಮನಸ್ಸು ಅರಳಿಸುವ ಜೊತೆ ಬಾವ, ಸಂಸ್ಕಾರ, ಸಂಸ್ಕೃತಿ ಕಲಿಸಿ ಸಮಾಜ-ಕ್ಕೆ ಬೆಳಕಾಗುವಂತೆ ಹೊಸ ಭಾಷ್ಯ ಬರೆಯುವ ವಿಶ್ವಾಸ ವ್ಯಕ್ತಪಡಿಸಿದರು.





ಈಗಾಗಲೇ “ಅಮ್ಮನ ಮಡಿಲು” ಟ್ರಸ್ಟ್ ಸ್ಥಾಪಿಸಿ ಅನಾಥ ಮಕ್ಕಳಿಗೆ ವಸತಿ, ಶಿಕ್ಷಣ ನೀಡಿ ಆತ್ಮವಿಶ್ವಾಸ ತುಂಬಿ ಸಮಾಜದ ಮುಖ್ಯವಾಹಿನಿಗೆ ತರಲು ಪ್ರಯತ್ನಿಸಿದ್ದೇನೆ ಎಂದರು.

ಈ ಹುದ್ದೆಗಾಗಿ ತಾವು ಯಾವುದೇ ತೆರನಾದ ಪ್ರಯತ್ನ ಮಾಡಿರಲಿಲ್ಲ. ಇದು ಅನಿರೀಕ್ಷಿತವಾಗಿ ಒದಗಿದ ಗೌರವ. ತಾವು ಈ ಹುದ್ದೆಗೆ ನ್ಯಾಯ ಒದಗಿಸಿ ಅಕಾಡೆಮಿಗೆ ಹೊಸ ಸ್ವರೂಪ ನೀಡುವ ಕನಸು ಹೊಂದಿರುವುದಾಗಿ ತಿಳಿಸಿದರು.

ಈ ವೇಳೆ ಶ್ರೀಮತಿ ಶ್ವೇತಾ ಸಂಗಮೇಶ ಬಬಲೇಶ್ವರ, ಪ್ರದೀಪ ಲಿಂಗದಳ್ಳಿ, ಗೌರಮ್ಮ ಬಬಲೇಶ್ವರ, ಮಾ.ಅಪ್ಪು ಬಬಲೇಶ್ವರ ಹಾಗೂ 'ಉದಯರಶ್ಮಿ' ಪ್ರಕಾಶಕಿ ಶ್ರೀಮತಿ ಶೈಲಾ ಮಣೂರ ಇದ್ದರು.

“ ಬಾಲ ವಿಕಾಸ ಅಕಾಡೆಮಿಗೆ ಸರ್ಕಾರದಿಂದ ಹೆಚ್ಚು ಅನುದಾನ ತಂದು ರಚನಾತ್ಮಕ ಕಾರ್ಯಗಳಿಗೆ ಬಳಕೆ ಮಾಡುವೆ. 0–18 ವರ್ಷದ ಮಕ್ಕಳು ಈ ಅಕಾಡೆಮಿ ವ್ಯಾಪ್ತಿಗೆ ಬರಲಿದ್ದು ಅವರಿಗೆ ಪೋಕ್ಸೋ ಕಾಯ್ದೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಅಕಾಡೆಮಿಯ ನೌಕರರಿಗೆ ಅಭದ್ರತೆ ಕಾಡದಂತೆ ನೋಡಿಕೊಳ್ಳುವೆ.”

– ಸಂಗಮೇಶ ಬಬಲೇಶ್ವರ

ನೂತನ ಅಧ್ಯಕ್ಷರು, ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಧಾರವಾಡ

### ಸರ್ಕಾರಿ ಕಾರು ಬಳಕೆ ಖಾಸಗಿ ಕಾರ್ಯಕ್ಕಲ್ಲ :ಬಬಲೇಶ್ವರ



ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರು ತಮ್ಮ ಕುಟುಂಬ ಸದಸ್ಯರೊಂದಿಗೆ ಸರ್ಕಾರಿ ಕಾರಿನಲ್ಲಿ ಬಾರದೇ ತಮ್ಮ ಸ್ವಂತ ವಾಹನದಲ್ಲಿ ಆಗಮಿಸಿ ಮಾದರಿಯ ನಡೆ ಅನುಸರಿಸಿದರು.

ಈ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರಿ ವಾಹನ ಅಕಾಡೆಮಿ ಕಾರ್ಯಗಳಿಗಾಗಿ ಅದರ ಅಧ್ಯಕ್ಷನಾದ ನನಗೆ ಉಪಯೋಗಿಸಲು ಸರ್ಕಾರ ನನಗೆ ಕೊಡಮಾಡಿದೆ. ಹೀಗಿರುವಾಗ ಅದನ್ನು ನನ್ನ ಕುಟುಂಬ ವರ್ಗದವರಿಗಾಗಿ ಬಳಸಿಕೊಳ್ಳುವುದು ಸರಿಯಲ್ಲ ಎಂದರು.

ಅನೇಕ ಅಧಿಕಾರಿಗಳು, ಜನಪ್ರತಿನಿಧಿಗಳು ಸರ್ಕಾರಿ ವಾಹನಗಳನ್ನು ತಮ್ಮ ಖಾಸಗಿ ಕಾರ್ಯಗಳಿಗೆ ಎಗ್ಗಿಲ್ಲದೇ ಉಪಯೋಗಿಸುವ ಇಂಥವರು ನಮ್ಮ ನಡುವೆ ಇರುವಾಗ ಸಂಗಮೇಶ್ವರ ಬಬಲೇಶ್ವರ ಅವರ ನಡೆ ಅಂಥವರಿಗೆ ಮಾದರಿಯಾಗುವಂತಿದೆ.

### ಜೂ.18 ಮತ್ತು 22 ರಂದು ವಿದ್ಯುತ್ ವ್ಯತ್ಯಯ

ಉದಯರಶ್ಮಿ ನ್ಯೂಸ್

ಸಿಂದಗಿ: ತಾಲೂಕಿನ 110/11ಕೆವಿ ವಿದ್ಯುತ್ ವಿತರಣಾ ಕೇಂದ್ರ, ಮೋರಟಗಿಯಿಂದ ಸರಬರಾಜಾಗುವ 11ಕೆವ್ಹಿ ಮೋರಟಗಿ ಮತ್ತು ಬಗಲೂರ ಎನ್‌ಜೆವಾಯ್ ಮಾರ್ಗಗಳ ಮೇಲೆ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಸದರಿ ಮಾರ್ಗಗಳ ಮೇಲೆ ಬರುವ ಮೋರಟಗಿ, ಕುಳೆಕುಮಟಗಿ, ಬಗಲೂರ, ಶಿರಸಗಿ, ಚಿಕ್ಕಹವಳಗಿ, ದೇವರನಾವದಗಿ, ತಾಂಡಾ, ಮತ್ತು ದೇವರನಾವದಗಿ ಗ್ರಾಮದ ವ್ಯಾಪ್ತಿಗಳಿಗೆ ಜೂ.18 ಮತ್ತು 22 ರಂದು ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ವಿದ್ಯುತ್ ವಿತರಣೆ ಇರುವುದಿಲ್ಲ. ಆದ್ದರಿಂದ ಸದರಿ ಗ್ರಾಮಗಳ ಗ್ರಾಹಕರು ಸಹಕರಿಸಬೇಕು ಎಂದು ಸಿಂದಗಿ ಹೆಸ್ಕಾಂ ಉಪವಿಭಾಗದ ಸಹಾಯಕ ನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಕಾಂಗ್ರೆಸ್ ಸರಕಾರ ಜನ ವಿರೋಧಿ ಸರಕಾರ :ಸಂಸದ ಜಿಗಜಿಣಗಿ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಜ್ಯದಲ್ಲಿ ಅಸ್ತಿತ್ವಕ್ಕೆ ಬಂದಿರುವ ಕಾಂಗ್ರೆಸ್ ಸರಕಾರ ಜನ ವಿರೋಧಿಯಾಗಿದೆ. ಪೆಟ್ರೋಲ್, ಡೀಸೆಲ್ ಮೇಲೆ ವಿಧಿಸಿದ ಮಾರಾಟ ತೆರಿಗೆಯನ್ನು ವಾಪಸ್ ಪಡೆಯಬೇಕು ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಸೋಮವಾರ ಪತ್ರಿಕಾ ಹೇಳಿಕೆ ನೀಡಿದ ಅವರು, ಬಡವರ ಪರ ಎಂದು ಹೇಳಿಕೊಳ್ಳುವ ಸಿಎಂ ಸಿದ್ದರಾಮಯ್ಯ ಇಂಧನದ ಮೇಲೆ ತೆರಿಗೆ ಹೆಚ್ಚಿಸಿದ್ದಾರೆ. ವಿದ್ಯುತ್ ಉಚಿತವಾಗಿ ನೀಡು ತ್ತೇವೆ ಎಂದು ಹೇಳಿ ವಾಣಿಜ್ಯಕ್ಕೆ ಬಳಕೆ ಯಾಗುವ ವಿದ್ಯುತ್ ದರ ಹೆಚ್ಚಳ ಮಾಡಿ ಮೋಸ ಮಾಡಿದ್ದಾರೆ. ಮನಸೋ ಇಚ್ಛೆ ನಡೆಸುತ್ತಿರುವ ಇವರ ಆಡಳಿತದಿಂದ ಬಡವರಿಗೆ



ಹೊರೆಯಾಗಿದೆ. 5 ಗ್ಯಾರಂಟಿಗಳನ್ನೂ ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ. ಬೆಲೆ ಏರಿಕೆಗಳನ್ನು ಗಮನಿಸಿದರೆ ರಾಜ್ಯ ಸರಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಹೇಳಿದರು.

## ಪೊಲೀಸ್ ಠಾಣೆ ಎದುರೇ ತಲೆ ಮೇಲೆ ಕಲ್ಲು ಎತ್ತಿಹಾಕಿ ವ್ಯಕ್ತಿಯ ಬರ್ಬರ ಹತ್ಯೆ!

ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಪೊಲೀಸ್ ಠಾಣೆ ಎದುರೇ ವ್ಯಕ್ತಿಯೊಬ್ಬರ ತಲೆ ಮೇಲೆ ಕಲ್ಲು ಎತ್ತಿಹಾಕಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆಯೊಂದು ಭಾನುವಾರ ನಡೆದಿದೆ.

ಎಲ್.ಎಂ.ಎಲ್ ಶೇಖರ್ ಕೊಲೆಯಾದ ವ್ಯಕ್ತಿ. ಅನೈತಿಕ ಸಂಬಂಧ, ಕಿರುಕುಳ, ಹಳೆ ದ್ವೇಷದಿಂದ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ವಿಚಾರ ಗೊತ್ತಾಗುತ್ತಿದ್ದಂತೆಯೇ ಚಿಕ್ಕಬಳ್ಳಾಪುರ ನಗರಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕೇಸ್ ದಾಖಲಿಸಿಕೊಂಡಿರುವ ಪೊಲೀಸರು ತನಿಖೆಯನ್ನು ಆರಂಭಿಸಿದ್ದಾರೆ.

## ಕೊಳಚೆ ಗುಂಡಿ ಖಾಲಿ: ಸಾರ್ವಜನಿಕ ಸಮಸ್ಯೆಗೆ ಸ್ಪಂದಿಸಿದ ಪಪಂ

ದೇವರಹಿಪ್ಪರಗಿ: ಬಸ್ ನಿಲ್ದಾಣ ಕಂಪೌಂಡಿಗೆ ಹೊಂದಿಕೊಂಡಿರುವ ಕೊಳಚೆ ಗುಂಡಿ ತ್ಯಾಜ್ಯದ ಸಮಸ್ಯೆಗೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಹಾಗೂ ಜಾಗೆಯ ಮಾಲೀಕ ಸ್ಪಂದಿಸಿ ಮಲೀನ ನೀರು ಹಾಗೂ ತ್ಯಾಜ್ಯವನ್ನು ತೆರವುಗೊಳಿಸಿದರು.

ಪಟ್ಟಣದ ಸ್ಥಳೀಯ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ಶನಿವಾರ ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ್ದು


ಕೊಳಚೆ ಗುಂಡಿ ಮುಚ್ಚಲು ಆಗ್ರಹಿಸಿ ವರ್ತಕರ ಮನವಿ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಬಸ್ ನಿಲ್ದಾಣ ಕಂಪೌಂಡಿಗೆ ಹೊಂದಿಕೊಂಡಿರುವ





ಭಾನುವಾರ “ಉದಯರಶ್ಮಿ” ಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗಿತ್ತು. ಸುದ್ದಿ ಹಾಗೂ ಸಮಸ್ಯೆಗೆ ಸ್ಪಂದಿಸಿದ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ ಕೂಡಲೇ ಕಾರ್ಯಪ್ರವೃತ್ತರಾಗಿ ಜಾಗೆಯ ಮಾಲೀಕರಿಗೆ ನಿರ್ದೇಶನ ನೀಡಿದ ಪರಿಣಾಮ ಜಾಗೆಯ ಮಾಲೀಕರು ಸಹ ಕೂಡಲೇ ಸ್ಪಂದಿಸಿ ಭಾನುವಾರ ಮಲೀನ ನೀರನ್ನು ತೆರವುಗೊಳಿಸಿದರು.

ನಂತರ ಪಟ್ಟಣ ಪಂಚಾಯಿತಿ ಸ್ವಚ್ಛತಾ ಸಿಬ್ಬಂದಿ ಜೆಸಿಬಿಯೊಂದಿಗೆ ಆಗಮಿಸಿ ಗುಂಡಿಯಲ್ಲಿ ತುಂಬಿದ್ದ ತ್ಯಾಜ್ಯವನ್ನು ಬೇರೆಡೆ ಸಾಗಿಸಿ ಗುಂಡಿಂ-ಯನ್ನು ಸ್ವಚ್ಛಗೊಳಿಸಿದರು.

ಸಾರ್ವಜನಿಕ ಸಮಸ್ಯೆಗೆ ಸ್ಪಂದಿಸಿ ತಕ್ಷಣವೇ ಕಾರ್ಯ ನೆರವೇರಿಸಿದ ಮುಖ್ಯಾಧಿಕಾರಿ, ಜಾಗೆಯ ಮಾಲೀಕ ಹಾಗೂ ಪಟ್ಟಣ ಪಂಚಾಯಿತಿ ಸ್ವಚ್ಛತಾ ಸಿಬ್ಬಂದಿಗೆ ಸ್ಥಳೀಯ ಅಂಗಡಿ ಮಾಲೀಕರು ಹಾಗೂ ಎಲ್ಲ ವ್ಯಾಪಾರಸ್ಥರು ಅಭಿನಂದಿಸಿದ್ದಾರೆ.

## ಪ್ರಕಾಶರವರಿಗೆ ಕನ್ನಡ ರತ್ನ ಪ್ರಶಸ್ತಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ಮಂಡ್ಯದ ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ಮಂಡ್ಯ ಹಾಗೂ ಕನ್ನಂಬಾಡಿ ಮತ್ತು ಕಾವೇರಿ ಪ್ರಭ ದಿನಪತ್ರಿಕೆ ಇವರುಗಳ ಆಶ್ರಯದಲ್ಲಿ ಮಂಡ್ಯದ ಗಾಂಧಿ ಭವನದಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿ ಅಂಗವಾಗಿ ಜರುಗಿದ 6 ನೆಯ ಅಕ್ಷರ ಜಾತ್ರೆ ಕಾರ್ಯಕ್ರಮದಲ್ಲಿ ಡಾ.ಜೀಶಂಪ ವೇದಿಕೆಯ ಅಧ್ಯಕ್ಷರಾದ ಕೃಷ್ಣ ಸ್ವರ್ಣಸಂದ್ರ ಇವರು ನಗರದ ಸಾಹಿತಿ, ಸಂಘಟಕರಾದ ಪ್ರಕಾಶ್ ಜಹಾಗೀರದಾರ ಇವರಿಗೆ ರಾಜ್ಯ ಮಟ್ಟದ ಕನ್ನಡರತ್ನ ಪ್ರಶಸ್ತಿ ನೀಡಿ ಗೌರವಿಸಿದರು.

# ಪೆಟ್ರೋಲ್ ಡಿಸೇಲ್ ದರ ಹೆಚ್ಚಳಕ್ಕೆ ಡಿವೈಎಫ್ಐ ಖಂಡನೆ

**ಉದಯರಶ್ಮಿ ನ್ಯೂಸ್**



ಸಿಂದಗಿ: ರಾಜ್ಯ ಸರಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಏರಿಕೆ ಮಾಡಿರುವುದು ಜನ ಸಾಮಾನ್ಯರಿಗೆ ಹೊರೆಯಾಗಿ ಪರಿಣಮಿಸಿದೆ. ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆ ಮಾಡಿರುವುದನ್ನು ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ ಡಿವೈ-ಎಫ್ಐ ರಾಜ್ಯ ಸಮಿತಿಯು ತೀವ್ರವಾಗಿ ಖಂಡಿಸುತ್ತದೆ ಮತ್ತು ಕೂಡಲೇ ಬೆಲೆ ಏರಿಕೆಯನ್ನು ಹಿಂಪಡೆಯಬೇಕೆಂದು ರಾಜ್ಯ ಸರಕಾರವನ್ನು ಒತ್ತಾಯಿಸುತ್ತದೆ ಎಂದು ಕರ್ನಾಟಕ ರಾಜ್ಯ ಸಮಿತಿ ಸದಸ್ಯ ರಮೇಶ ಸಾಸಾಬಾಳ ಹೇಳಿದ್ದಾರೆ.

ಭಾನುವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕರ್ನಾಟಕ ಸರಕಾರವು ಪೆಟ್ರೋಲ್ ಮತ್ತು ಡೀಜೆಲ್ ಮೇಲಿನ ಮಾರಾಟ ತೆ-ರಿಗೆಯನ್ನು ಹೆಚ್ಚಿಸಿರುವುದರಿಂದಾಗಿ ಪೆಟ್ರೋಲ್ ಬೆಲೆ 3ರೂ, ಡೀಸೆಲ್ ಬೆಲೆ3.50 ಪೈಸೆ ಹೆಚ್ಚಳವಾಗಿದೆ. 85.93 ಪೈಸೆಯಿದ್ದ ಡೀಸೆಲ್ ಬೆಲೆ 89.20 ಪೈಸೆಗೆ ಏರಿಕೆಯಾದರೆ 100 ರೂಪಾಯಿ ಇದ್ದ ಪೆಟ್ರೋಲ್ ದರ 103 ರೂ.ಗೆ ಹೆಚ್ಚಳವಾಗಿದೆ ಇದರಿಂದ ಸಾರ್ವಜನಿಕರಿಗೆ ಹೊರೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪೆಟ್ರೋಲ್, ಡಿಸೇಲ್ ಬೆಲೆಗಳು ದೈನಂದಿನ ಬದುಕಿಗೆ ಜನಸಾಮಾನ್ಯರು ಬಳಸುವ ಅಗತ್ಯ ಸರಕುಗಳ ಮೇಲೆಯೂ ಪರಿಣಾಮ ಬೀರುತ್ತವೆ. ಕಳೆದ ವರ್ಷ ಬರಗಾಲ ಬಿದ್ದಿರುವುದರಿಂದಾಗಿ ಗ್ರಾಮೀಣ ಪ್ರದೇಶದ ಜನತೆ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರಾಜ್ಯ ಸರಕಾರ ತನ್ನ ಆದಾಯ ಹೆಚ್ಚಿಸಿಕೊಳ್ಳಲು ತೈಲ ಬೆಲೆ ಏರಿಸಿರುವುದು ಯಾವುದೇ ಕಾರಣಕ್ಕೂ ಸಮರ್ಥನೀಯವಲ್ಲ. ಪೆಟ್ರೋಲ್-ಡೀಸೆಲ್ ಮೇಲಿನ ಮಾರಾಟ ತೆರಿಗೆ ಏರಿಕೆಯನ್ನು ತಕ್ಷಣವೇ ಹಿಂತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ತೀವ್ರ ಪ್ರತಿಭಟನೆಗೆ ಮುಂದಾಗಬೇಕಾಗುತ್ತದೆ ಎಂದು ಡಿವೈಎ[illegible] ರಾಜ್ಯ ಸಮಿತಿಯು ಒತ್ತಾಯಿಸುತ್ತದೆ ರಾಜ್ಯ ಸರಕಾರಕ್ಕೆ ಎಚ್ಚರಿಕೆ ನೀಡುತ್ತೇವೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಕರ್ತವ್ಯ ಲೋಪ: ಸಿಂದಗಿ ಪುರಸಭೆ ಮುಖ್ಯಾಧಿಕಾರಿ ಅಮಾನತು

**ಉದಯರಶ್ಮಿ ನ್ಯೂಸ್**



ಸಿಂದಗಿ: ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ ಅವರನ್ನು ಕರ್ತವ್ಯದ ಲೋಪದಡಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಮಾನತ್ತು ಮಾಡಿ ಆದೇಶ ಹೊರಡಿಸಿದ್ದಾರೆ.

ನಗರದ ಸ್ವಚ್ಛ ಮತ್ತು ನೈರ್ಮಲ್ಯತೆ ಕುರಿತಾಗಿ ಸಾರ್ವಜನಿಕರು ನೀಡಿದ ದೂರುಗಳನ್ನು ಪುರಸಭೆ ಮುಖ್ಯಾಧಿಕಾರಿ ಕಡೆಗಣಿಸಿದ್ದರು. ಕಳೆದ ನಾಲ್ಕೈದು ದಿನಗಳ ಹಿಂದೆ ನಗರದಲ್ಲಿ ಸೂರಿದ ಬಾರಿ ಮಳೆಯಿಂದ ಪಟ್ಟಣದ 23 ವಾರ್ಡಗಳಲ್ಲಿ ಚರಂಡಿ ನೀರು ಹೊರ ಬಂದು ಮನೆಗಳಲ್ಲಿ ನುಗ್ಗಿ ಸಾರ್ವಜನಿಕರಿಗೆ ತೊಂದರೆಯಾಗಿದೆ. ಅವರ ಸಮಸ್ಯೆಗಳನ್ನು ಪರಿಹ-ರಿಸಲು ಮುಂದಾಗಿಲ್ಲ. ಜೊತೆಗೆ ಕಛೇರಿಯ ಯಾವುದೇ ಸಭೆಗಳಿಗೆ ಹಾಜರಿರುವುದಿಲ್ಲ. ಪುರಸಭೆಯಲ್ಲಿ ನಡೆಯುವ ವ್ಯವಹಾರದ ಕು-ರಿತಾಗಿ ಜಿಲ್ಲಾಧಿಕಾರಿಗಳು ಮಾಹಿತಿ ಕೇಳಿದಾಗ ಅವರು ಯಾವುದೇ ಉತ್ತರ ನೀಡಿರುವುದಿಲ್ಲ. ಇಂತಹ ಹಲವಾರು ವಿಚಾರಗಳ ಕುರಿತಾಗಿ ಕರ್ತವ್ಯ ವೈಫಲ್ಯಗಳನ್ನು ಉಲ್ಲೇಖಿಸಿ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ ಅವರನ್ನು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಮಾನತ್ತು ಮಾಡಿದ್ದಾರೆ.

# ದೇವರಹಿಪ್ಪರಗಿ: ಬೀಜೋಪಚಾರ ಆಂದೋಲನಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬಿತ್ತನೆಗೆ ಮುಂಚಿತವಾಗಿ ಬೀಜಗಳಲ್ಲಿ ಬರ ನಿರೋಧಕತೆ ಹೆಚ್ಚಿಸಲು ಬೀಜೋಪಚಾರ ಅಗತ್ಯವಾಗಿದೆ ಎಂದು ಕೃಷಿ ಅಧಿಕಾರಿ ಸೋಮನಗೌಡ ಬಿರಾದಾರ ಹೇಳಿದರು.

ಪಟ್ಟಣದ ಸಾವಿತ್ರಿ ಹಿರೇಮಠ ಕೃಷಿಭೂಮಿಯಲ್ಲಿ ಶನಿವಾರ ಜರುಗಿದ ಬೀಜೋಪಚಾರ ಆಂದೋಲನದಲ್ಲಿ ಪಾಲ್ಗೊಂಡು ಮಾತನಾಡಿದರು.

ಬಿತ್ತನೆಗೆ ಮುಂಚೆ ಬೀಜಗಳನ್ನು ಶೇಕಡಾ 2ರ ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ ಒಂದು ಗಂಟೆ ನೆನೆಸಿ ನಂತರ ನೆರಳಿನಲ್ಲಿ ಕನಿಷ್ಟ 7 ಗಂಟೆ ಒಣಗಿಸಬೇಕು. ನಂತರ ಪ್ರತಿ ಕೆಜಿ ಬಿತ್ತನೆ ಬೀಜಕ್ಕೆ 03 ಗ್ರಾಂ ಶೀಲೀಂದ್ರ ಮಿಶ್ರಣವಾದ



ಕಾರ್ಬೇಂಡೈಜಿಮ್ ಶೇ.12 ಹಾಗೂ ಮ್ಯಾಂಕೋಜೇಬ್ ಶೇ.64 ಅಥವಾ 10 ಗ್ರಾಮ್ ಜೈವಿಕ ಗೊಬ್ಬರಗಳಾದ ಟ್ರೈಕೋಡರ್ಮ, ಪಿಎಸ್‌ಬಿ ಹಾಗೂ ರೈಜೋಬಿಯಂಗಳಿಂದ ಬೀಜೋಪಚಾರ ಮಾಡಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಮೀನಿನ ಒಂದು ಎಕರೆಪ್ರದೇಶವನ್ನು ತೊಗರಿ ಬೆಳೆ ಪ್ರಾತ್ಯಕ್ಷಿಕೆಗಾಗಿ ಆಯ್ಕೆ ಮಾಡಲಾಯಿತು.

ನಿವೃತ್ತ ತಾಲ್ಲೂಕು ಪಂಚಾಯಿತಿ ಎಡಿ ಪ್ರಭುದೇವ ಹಿರೇಮಠ, ಸಿಂದಗಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಎಚ್.ವೈ.ಸಿಂಗೆಗೋಳ, ಕೃಷಿ ಅಧಿಕಾರಿ ಎಚ್.ಕೆ.ಪಾಟೀಲ, ಸಹಾಯಕ ಕೃಷಿ ಅಧಿಕಾರಿ ರಾಜು ಸದಾನಂದ, ಆತ್ಮಾ ಸಿಬ್ಬಂದಿ ಸುಧಾಕರ್ ಇರಸೂರ, ಪಂಚಾಯಿತಿಗಳ ಕೃಷಿಸಖಿಯರು, ತಾಂತ್ರಿಕ ಉತ್ತೇಜಕರು ಇದ್ದರು.

# ನೀಟ್ ಪರೀಕ್ಷೆಯಲ್ಲಿ ಅಕ್ರಮ: ನಿಷ್ಪಕ್ಷಪಾತ ತನಿಖೆಗೆ NSUI ಆಗ್ರಹ

**ಉದಯರಶ್ಮಿ ನ್ಯೂಸ್**



ವಿಜಯಪುರ: ನೀಟ್ ಫಲಿತಾಂಶದಲ್ಲಿ ಭಾರಿ ಅಕ್ರಮದ ನಡೆದಿದ್ದು ನೀಟ್ ಪರೀಕ್ಷೆ ನಿಷ್ಪಕ್ಷಪಾತವಾಗಿ ತನಿಖೆ ಮಾಡಬೇಕು ಎಂದು ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ ವಿಜಯಪುರ (ಓಖಗಿಖ )ಅಧ್ಯಕ್ಷ ಅಮಿತ ಚವ್ಹಾಣ ಆಗ್ರಹಿಸಿದ್ದಾರೆ.

ಪರೀಕ್ಷೆಯ ವಿಶ್ವಾಸಾರ್ಹತೆ ಬಗ್ಗೆ ಎದ್ದಿರುವ ಪ್ರಶ್ನೆಗಳಿಗೆ ಏನ್ ಟಿ ಎ ಆಗಲಿ ಕೇಂದ್ರ ಸರ್ಕಾರವಾಗಲಿ ಉತ್ತ-ರಿಸದೆ ಇರುವುದು ಲಕ್ಷಾಂತರ ಯುವ ಜನರ ಭವಿಷ್ಯ ಮಣ್ಣುಪಾಲು ಮಾಡಲು ಹೊರಟಿದೆ. ನೀಟ್ ಪರೀಕ್ಷೆಯಲ್ಲಿ 67 ವಿದ್ಯಾರ್ಥಿಗಳು 720ಕ್ಕೆ 720ಅಂಕಗಳು ಬಂದಿವೆ. ಪರೀಕ್ಷೆಯಲ್ಲಿ ಪ್ರತಿ ತಪ್ಪು ಉತ್ತರಕ್ಕೆ ಋಣಾತ್ಮಕ ಅಂಕಗಳಿರುವ ಕಾರಣ ಇಷ್ಟೊಂದು ಮಂದಿ ಶೇ% 100ರಷ್ಟು ಗಳಿಸಲು ಹೇಗೆ ಸಾಧ್ಯ? ಇದನ್ನು ಕೇಂದ್ರ ಸರ್ಕಾರ ಸ್ಪಷ್ಟಪಡಿಸಬೇಕೆಂದು ಚವ್ಹಾಣ ಪತ್ರಿಕಾ ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ.




# ಜಿಲ್ಲಾ ರಕ್ತನಿಧಿಗೆ 12000 ಯೂನಿಟ್ ರಕ್ತ ಅಗತ್ಯ :ಕುಂಬಾರ

**ಉದಯರಶ್ಮಿ ನ್ಯೂಸ್**

ಇಂಡಿ: ಪಟ್ಟಣದ ಸರಕಾರಿ ಆಸ್ಪತ್ರೆ ಕೇಂದ್ರಕ್ಕೆ ಶೇ. 1.5 ರಕ್ತದ ಸಂಗ್ರಹ ಅವಶ್ಯಕತೆ ಇದ್ದು ಜಿಲ್ಲೆಗೆ 12 ಸಾವಿರ ಯೂನಿಟ್ ರಕ್ತದ ಅವಶ್ಯಕತೆ ಇದೆ ಎಂದು ಹಾಲಿ ಪುರಸಭೆ ಸದಸ್ಯ ಮಾಜಿ ಅಧ್ಯಕ್ಷ ದೇವೆಂದ್ರ ಕುಂಬಾರ ಹೇಳಿದರು.

ಪಟ್ಟಣದ ಕೇಂದ್ರ ಬಸ್ ನಿಲ್ದಾಣದಲ್ಲಿ ಪುರಸಭೆ ಸದಸ್ಯ ಅನೀಲಗೌಡ ಬಿರಾದಾರ ಮತ್ತು ಅವಳಿ ಸಹೋದರ ಸುನೀಲಗೌಡ ಬಿರಾದಾರ ಇವರ 39 ನೇಯ ಹುಟ್ಟು ಹಬ್ಬದ ವಾರ್ಷಿಕೋತ್ಸವಲ್ಲಿ 13 ನೆಯ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಶ್ರೀ ಶಾಂತೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಕಾಸುಗೌಡ ಬಿರಾದಾರ ಮಾತನಾಡಿ ಇಂಡಿ ತಾಲೂಕಿನ ಜನಸಂಖ್ಯೆ 4 ಲಕ್ಷ ಇದ್ದು ತಾಲೂಕಾ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ರಕ್ತದ ಅಗತ್ಯವಿದೆ. ಬೇರೆ ದಾನಗಳಿಗಿಂತ ರಕ್ತದಾನ ಮಹಾದಾನವಾಗಿದೆ ಎಂದರು.

ಬಿಜೆಪಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಿವಡೆ ಮಾತನಾಡಿ



ರಕ್ತದ ಅವಶ್ಯಕತೆ ಇರುವವರಿಗೆ ರಕ್ತ ಕೊಟ್ಟಾಗ ಅವರ ಜೀವವನ್ನು ಉಳಿಸಿದಂತಾಗುತ್ತದೆ. ನಾನು ಕಳೆದ ಬಾರಿ ರಕ್ತದಾನ ಮಾಡಿದ್ದು ಒಟ್ಟು ಆರು ಬಾರಿ ರಕ್ತದಾನ ಮಾಡಿದ್ದೇನೆ ಎಂದರು.

ಜಾತ್ಯಾತೀತ ಜನತಾದಳ ತಾಲೂಕಾ ಅಧ್ಯಕ್ಷ ಬಿ.ಡಿ.ಪಾಟೀಲ ಮಾತನಾಡಿ ಪ್ರತಿಯೊಬ್ಬರು ರಕ್ತದಾನ ಮಾಡಬೇಕು. ಆಗ ಮಾತ್ರ ಮತ್ತೊಬ್ಬರ ಜೀವ ಉಳಿಸಲು ಸಾಧ್ಯ. ರಕ್ತದಾನ ಮಾಡುವದ-ರಿಂದ ಯಾವದೇ ತೊಂದರೆ ಇಲ್ಲ. ಈ ಸಂಬಂಧ ಜನರಿಗೆ ಅರಿವು ಮೂಡಿಸುವ ಅಗತ್ಯವಿದೆ. ರಕ್ತಕ್ಕಾಗಿ ಬೇರೆ ಕಡೆ ಕಳುಹಿಸುವ ಬದಲು ನಮ್ಮಲ್ಲೇ ರಕ್ತ ಸಂಗ್ರಹವಿದ್ದರೆ ಅನುಕೂಲವಾಗುತ್ತದೆ ಎಂದರು.

ಸಮಾರಂಭದಲ್ಲಿ ಅನೀಲಗೌಡ ಬಿರಾದಾರ, ಶ್ರೀಪತಿಗೌಡ ಬಿರಾದಾರ, ಜಟ್ಟೆಪ್ಪ ರವಳಿ, ಜಾವೇದ ಮೋಮಿನ್, ಪ್ರಶಾಂತ ಕಾಳೆ, ಜಗದೀಶ ಕ್ಷತ್ರಿ, ಬಾಳು ಮುಳಜಿ, ಶೀಲವಂತ ಉಮರಾಣಿ, ರಾಮಸಿಂಗ ಕನ್ನೊಳ್ಳಿ , ವಿ.ಎಚ್.ಬಿರಾದಾರ, ಭೀಮಣ್ಣ ಕವಲಗಿ, ಜೈನೊದ್ದೀನ್ ಬಾಗವಾನ ವೈದ್ಯರಾದ ಡಾ॥ ಸುಮನ ಮಮದಾಪುರ, ಡಾ॥ ಪ್ರಶಾಂತ ಧೂಮಗೊಂಡ, ಬಿಎಚ್ಒ ವಾಯ್ ಎಂ.ಪೂಜಾರಿ ಮತ್ತಿತರಿದ್ದರು.

## ಎನ್.ಆರ್. ಕುಲಕರ್ಣಿ ಅವರ "ಬಕುಲ ಪುಷ್ಪ" ಗ್ರಂಥ ಲೋಕಾರ್ಪಣೆ । ಗ್ರಂಥ ತುಲಾಭಾರ

# ಸಾಹಿತ್ಯದ ಜ್ಞಾನದಿಂದ ಜೀವನದಲ್ಲಿ ಯಶಸ್ವಿಯಾಗಲು ಸಾಧ್ಯ :ಪಟ್ಟಣಶೆಟ್ಟಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಎನ್.ಆರ್. ಕುಲಕರ್ಣಿ ಅವರ ಬಕುಲ ಪುಷ್ಪ ಅಭಿನಂದನ ಗ್ರಂಥ ಬಿಡುಗಡೆ ಹಾಗೂ ಗ್ರಂಥ ತುಲಾಭಾರ ಸಮಾರಂಭವು ನಗರದ ಕಂದಗಲ್ಲ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಜರುಗಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಒಂದು ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭಕ್ಕೆ ಇಷ್ಟೊಂದು ಜನ ಕೂಡಿರುವದು ಸಂತಸವನ್ನುಂಟು ಮಾಡುತ್ತದೆ. ಸಾಹಿತ್ಯಾಭಿರುಚಿ ಎಲ್ಲರಲ್ಲಿ ಇರಬೇಕು. ಸಾಹಿತ್ಯದ ಜ್ಞಾನದಿಂದ ನಾವು ನಮ್ಮ ಜೀವನದಲ್ಲಿ ಯಶಸ್ವಿ ಆಗಲು ಸಾಧ್ಯವಾಗುತ್ತದೆ. ಸಂಪತ್ತಿನಿಂದ ಜ್ಞಾನ ಸಂಪಾದಿಸಲು ಸಾಧ್ಯವಿಲ್ಲ. ನಮ್ಮಲ್ಲಿ ಜ್ಞಾನವೊಂದಿದ್ದರೆ ಈ ಜೀವನದಲ್ಲಿ ಏನೆಲ್ಲಾ ಪಡೆದುಕೊಳ್ಳಬಹುದು. ಅದೇ ರೀತಿ ಎನ್.ಆರ್. ಕುಲಕರ್ಣಿ ಅವರಂತೆ ಸಾಹಿತ್ಯಾಭಿರುಚಿಂ-ದೊಂದಿಗೆ ಒಳ್ಳೆಯ ಗುಣಗಳನ್ನು ಬೆಳೆಸುವ ನಿಟ್ಟಿನಲ್ಲಿ ಇಲ್ಲಿ ನೆರೆದ ಎಲ್ಲ ಪೋಷಕರು ತಮ್ಮ ಮಕ್ಕಳಿಗೆ ತಿಳಿ ಹೇಳಿ ಸಮಾಜ ಮುಖಿಯಾಗಿ ಬೆಳೆಯುವಲ್ಲಿ ಸಹಕಾರಿಯಾಗುತ್ತದೆ ಎಂದರು.

ಕೆ.ಎಫ್. ಅಂಕಲಗಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ಎನ್.ಆರ್. ಕುಲಕರ್ಣಿ ಅವರು ರಚಿಸಿದ ಬಕುಲ ಪುಷ್ಪ ಗ್ರಂಥದಲ್ಲಿ ಎನ್.ಆರ್. ಕುಲಕರ್ಣಿ ಅವರು ಬೆಳೆದು ಬಂದ ಪರಿ, ಅವರು ಅನುಭವಿದ ಕಷ್ಟ-ಸುಖಗಳನ್ನು ಕು-ರಿತು ಸವಿಸ್ತಾರವಾಗಿ ಬರೆದಿದ್ದು, ಈ ಗ್ರಂಥವನ್ನು ತಾವು ಪಡೆದುಕೊಂಡು ಇಂತಹ ಆದರ್ಶಮಯ ವ್ಯಕ್ತಿಯ ಕುರಿತು ತಿಳಿದುಕೊಳ್ಳಬಹುದು ಎಂದರು.

ಡಾ.ಆರ್.ಕೆ. ಕುಲಕರ್ಣಿ, ವಿಶ್ರಾಂತ ಇಂಗ್ಲೀಷ ಪ್ರಾಧ್ಯಾಕರು ಗ್ರಂಥ ಬಿಡುಗಡೆಗೊಳಿಸಿ ಮಾತನಾಡುತ್ತ, ಮಣ್ಣಿಲ್ಲದೇ ಮಡಿಕೆ ಇಲ್ಲ, ಅದೇ ರೀತಿ ನಾವು ಮಾಡುವ ಕೆಲಸದಲ್ಲಿ ನಮ್ಮಲ್ಲಿ ಆತ್ಮಸ್ಥೈರ್ಯ ಇದ್ದರೆ ಸಾಧನೆ ಮಾಡಬಹುದು. ಅದೇ ನಮ್ಮಲ್ಲಿ ಕಾರ್ಯಶಕ್ತಿಯನ್ನು ಮೈಗೂಡಿಸಿಕೊಳ್ಳಬೇಕು. ಎನ್.ಆರ್. ಕುಲಕರ್ಣಿಯವರು ತಾಂಬಾದಲ್ಲಿ ಜನಿಸಿ, ಬೊಮ್ಮನಹಳ್ಳಿ, ಜೇರಟ-ಗಿಯಲ್ಲಿ ವಿದ್ಯಾಭ್ಯಾಸ ಕಲಿತು ನಂತರ ತಮ್ಮ ಶಿಕ್ಷಕ ವೃತ್ತಿಯನ್ನು ಗಡಿನಾಡ ಪ್ರದೇಶವಾದ ನಾಗಣಸೂರದಲ್ಲಿ



ಸುಮಾರು 36 ವರ್ಷಗಳ ಕಾಲ ತಮ್ಮ ಸೇವೆಯನ್ನು ಕನ್ನಡ ಮಾತೆಗೆ ತಮ್ಮದೇ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಮಹಾನ ವ್ಯಕ್ತಿಯ ಅಭಿನಂದನಾ ಗ್ರಂಥವಾಗಿ ಹೊರಹೊಮ್ಮಿರುವ ಬಕುಲ ಪುಷ್ಪ ವು ಬಕುಲ ಎಂದರೆ ಎನ್.ಆರ್. ಕುಲಕರ್ಣಿ ಅವರ ತಾಯಿಯ ಹೆಸರಾದ ಬಕುಲಬಾಯಿ ಎಂಬುದು ಅದೇ ರೀತಿ ಪುಷ್ಪ ಎಂದರೆ ಹೂವು ತಮ್ಮ ತಾಯಿಯ ನಿರ್ಮಲವಾದ ಆರ್ಶೀವಾದ ಸೂಚ್ಯಕವಾಗಿ ಬಕುಲ ಪುಷ್ಪ ಎಂಬುದು ಈ ಗ್ರಂಥವಾಗಿದೆ ಎಂದರು.

ಆರ್.ಕೆ. ಕುಲಕರ್ಣಿ ಇವರು ಗ್ರಂಥಾವಲೋಕನ ಮಾತನಾಡಿ, ಎನ್.ಆರ್. ಎಂದರೆ ಎನ್ನವರು ಎಂರ್ಥ ಅವರ ಹೆಸರಿಗೆ ತಕ್ಕಂತೆ ತನ್ನವರನ್ನು ತಮ್ಮ ಸುತ್ತಮುತ್ತಲಿರುವ ಎಲ್ಲ ಸಹೃಯಿಗಳನ್ನು ಎನ್ನವರು ಎನ್ನುವ ಭಾವನೆಯಿಂದಲೆ ಇಂತಹ ಗ್ರಂಥ ಹೊರಲು ಸಾಧ್ಯವಾಗಿದೆ. ಈ ಗ್ರಂಥದಲ್ಲಿ ಸುಮರು 351ಕ್ಕೂ ಹೆಸರು ಪುಟಗಳಿದ್ದು, ಸುಮಾರು 6 ಭಾಗಗಳನ್ನಾಗಿ ವಿಂಗಡಿಸಲಾಗಿದೆ. ಇದರಲ್ಲಿ 16 ಕಾವ್ಯಕಾರಂಜಿ, ಗದ್ಯಗುಚ್ಛ, ಸಂಕೀರ್ಣ, ಲೇಖನಗಳನ್ನು ಒಳಗೊಂಡಿದ್ದು, ಈ ಗ್ರಂಥ ಒಳ-ಹೊರ ವಿನ್ಯಾಸ ಬಹಳ ಚೆನ್ನಾಗಿದ್ದು, ಈ ಗ್ರಂಥ-'ದಲ್ಲಿ ಎನ್.ಆರ್. ಕುಲಕರ್ಣಿಅವರು ಬೆಳೆದು ಬಂದ ಪರಿ, ಇವರಿಗೆ ಗಡಿಭಾಗದಲ್ಲಿ ಕನ್ನಡ ಬೆಳೆಸುವಲ್ಲಿ ಪಟ್ಟ ಶ್ರಮ, ಇನ್ನಿತರ ವಿಷಯಗಳ ಕುರಿತು ಸವಿಸ್ತಾರವಾಗಿ ತಿಳಿಸಲಾಗಿದೆ ಎಂದು ಗ್ರಂಥದ ಬಗ್ಗೆ ತಿಳಿಸಿದರು.

ಸಾನ್ನಿಧ್ಯ ವಹಿಸಿದ ಶ್ರೀಕಂಠ ಶಿವಾಚಾರ್ಯ ಸ್ವಾಮೀಜಿ, ಶ್ರೀ ಗುರು ಬಮ್ಮಲಿಂಗೇಶ್ವರ ಬೃಹನ್ಮಠ, ನಾಗಣಸೂರ ಇವರು ಆಶೀರ್ವಚನ ನೀಡಿದರು.

ವಿ.ಎಸ್. ಖಾಡೆ ಸ್ವಾಗತಿಸಿದರು. ಡಾ.ಜಿ.ಡಿ. ಕೊಟ್ನಾಳ ಹಾಗೂ ಎಸ್.ಬಿ. ಬಾಗೇವಾಡಿ ಪರಿಚಯಸಿದರು. ಪ್ರೊ.ಯು. ಆರ್. ಕುಂಟೋಜಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶ್ರೀಮತಿ ವಿದ್ಯಾವತಿ ಅಂಕಲಗಿ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಮಂದಾಕಿನಿ ಬಿರಾದಾರ ಇವರ ಸಂಗಡಿಗರಿಂದ ವಚನ ಗಾಯನ ನಡೆಯಿತು.

ಕಾರ್ಯಕ್ರಮದಲ್ಲಿ ಅಬಿನಂದನ ಗ್ರಂಥ ಸಂಪಾದಕ ಸಮಿತಿಯಿಂದ ಡಾ. ಅನುರಾಧಾ ಪ್ರವೀಣ ಜೋಶಿ, ಜಿ.ಆರ್. ಕುಲಕರ್ಣಿ, ಎಸ್.ಬಿ. ಬಾಗೇವಾಡಿ, ಶ್ರೀಮತಿ ವಿದ್ಯಾವತಿ ಅಂಕಲಗಿ, ಹಾಗೂ ಅಭಿನಂದನ ಸಮಿತಿಯಿಂದ ವಿ.ಎಸ್. ಖಾಡೆ, ಎಸ್.ಎಂ. ಕಣಬೂರ, ಜಿ.ಎಸ್.ಕುಲಕರ್ಣಿ, ಶಂಕರ ಬಸವಪ್ರಭು (ಸಕ್ರಿ), ಸಿದ್ದಲಿಂಗಪ್ಪ ಹದಿಮೂರ, ಮೋಹನ ಪಿ. ಕುಲಕರ್ಣಿ, ಶಿವಪುತ್ರಪ್ಪ ಕೃಷ್ಣಮೂರ್ತಿ, ರುಕ್ಮಾಂಗದ ಅ. ಗುಡಿ, ಶ್ರೀಶೈಲ ಜಿ. ಮದಭಾವಿ, ಪಂಡಿರಾವ ಪಾಟೀಲ, ಶ್ರೀಮತಿ ಸ್ಮೃತಿ ಮುಕುಂದ ಕುಲಕರ್ಣಿ ಹಾಜರಿದ್ದರು.

# ಮಾರಣಾಂತಿಕ ಹಲ್ಲೆ: ಆರೋಪಿ ಬಂಧನ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕಳೆದ ಕೆಲ ದಿನಗಳ ಹಿಂದೆ ಪಟ್ಟಣದ ನ್ಯಾಯಾಲಯದ ಎದುರು ಯುವಕನೋರ್ವನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ಪ್ರಕರಣದಲ್ಲಿ ಪರಾರಿಯಾಗಿದ್ದ ಆರೋಪಿಗಳ ಪೈಕಿ ಶಂಕ್ರಪ್ಪ ಕರಳ್ಳಿಯನ್ನು ಪೊಲೀಸರು ಬಂಧಿಸಿ ವಿಜಯಪುರದ ಕೇಂದ್ರ ಕಾರಾಗ್ರಹಕ್ಕೆ ಅಟ್ಟಿದ್ದಾರೆ.

ಬಾಗೇವಾಡಿ ತಾಲೂಕಿನ ಜಯವಾಡಗಿ ಗ್ರಾಮದ ಕರಳ್ಳಿ ಕುಟುಂಬಸ್ತರು ತಮ್ಮ ಮನೆಯ ಹೆಣ್ಣುಮಗಳಿಗೆ ಮಾತನಾಡಿಸಿದ್ದಕ್ಕೆ ಸಿಟ್ಟಾಗಿ ಅದೇ ಗ್ರಾಮದ ನಿವಾಸಿ ಸಂತೋಷ ಕಾಡಮಗೇರಿ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದರು. ಈ ಘಟನೆ ಪಟ್ಟಣದ ನ್ಯಾಯಾಲಯದ ಎದುರು ನ್ಯಾಯವಾದಿಗಳ ಮತ್ತು ಸಾರ್ವಜನಿಕರ ಮಧ್ಯೆ ಸಂಭವಿಸಿದ್ದ-ರಿಂದ ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಬೇಕು ಎಂಬ ಕೂಗು ಕೇಳಿ ಬಂದಿತ್ತು.

ಘಟನಾ ಸ್ಥಳಕ್ಕೆ ಪೊಲೀಸರು ಆಗಮಿಸುತ್ತಿದ್ದಂತೆಯೇ ಕಾಲ್ಕಿತ್ತಿದ್ದ ಆರೋಪಿಗಳ ಹೆಡೆಮುರಿ ಕಟ್ಟಲು ಇಲ್ಲಿನ ಪಿಎಸ್-ಆಯ್ ಸಂಜೀವ ತಿಪರೆಡ್ಡಿ ತೀವ್ರ ಶೋಧ ನಡೆಸಿದ್ದರು. ಘಟನೆಯ ಹಿನ್ನೆಲೆ 8 ಜನರ ವಿರುದ್ಧ ಪ್ರಕರಣ ದಾಖಲಾಗಿದ್ದು ಸೋಮುವಾರ ಬೆಳ್ಳಂಬೆಳಿಗ್ಗೆ ಎ4 ಆರೋಪಿ ಪೊಲೀಸರಿಗೆ ಅತಿಥಿಯಾಗಿದ್ದಾನೆ. ಇನ್ನುಳಿದ ಆರೋಪಿಗಳಿಗಾಗಿ ಶೋಧ ಕಾರ್ಯ ಮುಂದುವರೆದಿರುವದಾಗಿ ಪೊಲೀಸ ಮೂಲಗಳು ತಿಳಿಸಿವೆ.

# ಮಧ್ಯ ಸೇವಿಸಲು ಸ್ಥಳಾವಕಾಶ :ಪ್ರಕರಣ ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಮಧ್ಯ ಸೇವಿಸಲು ಸ್ಥಳಾವಕಾಶ ಮಾಡಿಕೊಟ್ಟ ಆರೋಪದಡಿ ತಾಲೂಕಿನ ದೇವೂರು ಗ್ರಾಮದ ಶಿವಪ್ಪ ಕೋಲಕಾರ ಮೇಲೆ ಪ್ರಕರಣ ದಾಖಲಾಗಿದೆ.

ತನ್ನ ಪಾಯಿದೆಗೊಸ್ಕರ ಸಂಬಂಧಿಸಿದ ಪ್ರಾಧಿಕಾರದಿಂದ ಯಾವುದೇ ಲೈಸೆನ್ಸ ವ ಪರವಾನಿಗೆಯನ್ನು ಪಡೆಯದೆ ದೇವೂರ ಗ್ರಾಮದ ಹತ್ತಿರದಲ್ಲಿರುವ ತನ್ನ ಚಹಾದ ಅಂಗಡಿಯ ಮುಂದೆ ಸಾರ್ವಜನಿಕರಿಗೆ ಮದ್ಯ ಸೇವನೆ ಮಾಡಲು ಗ್ಲಾಸು, ನೀರು ಹಾಗೂ ತಿನಿಸು ಕೊಟ್ಟು ಮದ್ಯ ಸೇವಿಸಲು ಸ್ಥಳಾವಕಾಶ ಮಾಡಿಕೊಟ್ಟು ಪೊಲೀಸರ ಕೈಗೆ ಸಿಕ್ಕಿ ಬಿದ್ದಿದ್ದು, ಈ ಆರೋಪದ ಮೇಲೆ ಪಿಎಸ್ಐ ಸಂಜೀವ ತಿಪರೆಡ್ಡಿ ಪ್ರಕರಣ ದಾಖಲಿಸಿದ್ದಾರೆ.

# ಗಾಣಿಗ ರತ್ನ ಪ್ರಶಸ್ತಿ ಪಡೆದ ಶಿಕ್ಷಕ ತೇಲಿ

**ಉದಯರಶ್ಮಿ ನ್ಯೂಸ್**



ತಿಕೋಟಾ: ತಾಲ್ಲೂಕಿನ ಬಾಬಾನಗರ ಗ್ರಾಮದ ಸರ್ಕಾರಿ ಹೆಣ್ಣು ಮಕ್ಕಳ ಪ್ರಾಥ-'ಮಿಕ ಶಾಲಾ ಶಿಕ್ಷಕ ಹಾಗೂ ಜಿಓಸಿಸಿ ಬ್ಯಾಂಕ ನಿರ್ದೇಶಕ ಐ.ಎ.ತೇಲಿ ಅವರಿಗೆ ಹುಬ್ಬಳ್ಳಿಯಲ್ಲಿ ರವಿವಾರ ನಡೆದ ಜ್ಞಾನಯೋಗಿ ವಿಧ್ಯಾಸಂಸ್ಥೆ (ರಿ) ಧಾರವಾಡ ಸಂಸ್ಥೆಯ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ ಹಾಗೂ ವೈ.ಬಿ.ಕಡಕೋಳ ಅವರ ಗಾಣಿಗರ ಹೆಜ್ಜೆಗಳು ಪುಸ್ತಕ ಬಿಡುಗಡೆ ಸಮಾರಂಭದಲ್ಲಿ "ಗಾಣಿಗ ರತ್ನ" ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಡಾ. ಜಯಬಸವಕುಮಾರ ಸ್ವಾಮೀಜಿ , ಯೋಗಿ ಶ್ರೀ ಕಲ್ಲಿನಾಥ ಗುರುಗಳ ಅಮೃತ ಹಸ್ತದಿಂದ ಸಂಸ್ಥೆಯು ಈ ಪ್ರಶಸ್ತಿ ನೀಡಿದೆ. ಎಂ.ಎಸ್.ಗಾಣಿಗೇರ, ಎಲ್.ಐ.ಲಕ್ಕಮ್ಮನವರ, ವೈ.ಬಿ.ಕಡಕೋಳ ಹಾಗೂ ಗಣ್ಯರು ಇದ್ದರು.

# ಬಕ್ರೀದ್: ಮುಸ್ಲಿಂ ಬಾಂಧವರಿಂದ ಸಾಮೂಹಿಕ ಪ್ರಾರ್ಥನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದಲ್ಲಿ ಸೋಮವಾರ ಮುಸ್ಲಿಂ ಬಾಂಧವರು ಪವಿತ್ರ ಬಕ್ರೀದ ಹಬ್ಬದ ಪ್ರಯುಕ್ತ ನಗರದ ದಖನಿ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಸಯ್ಯದ್ ಮೊಹಮ್ಮದ್ ತನ್ವಿರಪೀರಾಂ ಹಾಶಮಿ ಪ್ರಾರ್ಥನೆ ಸಲ್ಲಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಅಬ್ದುಲ್ ಹಮೀದ್ ಮುಶ್ರೀಫ್, ಫಯಾಜ್



ಕಲಾದಗಿ, ಚಂದ್ಸಬ್ ಗಡೇಗ್ಲಾವ್, ಬಂದೇನವಾಜ್ ಸಾಂಗ್ಲಿಕರ್, ಮೊಹಮ್ಮದನಾಸಿಮ್ ರೋ-ಜಿಂದರ್, ಫಾರೂಕ್ ಶುತ್ತಾರಿ, ಸಂದಾನಿ ಇನಾಮದರ್ ಸೇರಿದಂತೆ ಸಾವಿರಾರು ಸಂಖ್ಯೆಯಲಿ ಜನ ಉಪಸ್ಥಿತರಿದ್ದರು

# ದೈಹಿಕ ಚಟುವಟಿಕೆ (ಕ್ರೀಡೆ) ಮತ್ತು ಆರೋಗ್ಯ

**ಉದಯರಶ್ಮಿ ದಿನಪತ್ರಿಕೆ**

ಇತ್ತೀಜಿನ ದಿನಗಳಲ್ಲಿ ಚಿಕ್ಕವರಲ್ಲಿ ಶಾಲೆ, ಓದು, ಪರೀಕ್ಷೆ ಮತ್ತು ದೊಡ್ಡವರಲ್ಲಿ ದುಡಿಮೆ, ಆಸ್ತಿ, ಪಾರ್ಟಿ ಇಂತಹ ವಿಷಯಗಳಿಗೆ ಇರುವ ಮಹತ್ವ ಕ್ರೀಡೆ ಮತ್ತು ದೈಹಿಕ ಚಟುವಟಿಕೆಗಳಿಗೆ ಇರುವುದಿಲ್ಲ. ಆದರೆ ಮನುಷ್ಯ ಆರೋಗ್ಯದಿಂದಿರಲು ಪೌಷ್ಟಿಕ ಭರಿತ ಆಹಾರ ಮತ್ತು ನಿದ್ದೆಯೊಂದಿಗೆ ದೈಹಿಕ ಚಟುವಟಿಕೆ (ಕ್ರೀಡೆ)ಗಳು ಅಷ್ಟೇ ಮುಖ್ಯ.



ಆರೋಗ್ಯ ಎಂದರೆ, ಕೇವಲ ರೋಗಮುಕ್ತ ಅಥವಾ ಯಾವುದೇ ರೋಗದಿಂದ ಬಾಧಿತರಾಗಿರುವುದೇ ಅಷ್ಟೇ ಅಲ್ಲ. ಆರೋಗ್ಯ ಎಂದರೆ, ದೈಹಿಕ ಮಾನಸಿಕ ಮತ್ತು ಸಾಮಾಜಿಕ ಸಮತೋಲನ ಸ್ಥಿತಿಯೊಂದಿಗೆ ರೋಗದ ಅನುಪಸ್ಥಿತಿಯಲ್ಲಿರುವುದು. ಮತ್ತು ಇವುಗಳನ್ನು ಸಮತೋಲನ ಸ್ಥಿತಿಯಲಿಡಲು ಕ್ರೀಡೆಗಳು ಅತಿ



ಅವಶ್ಯಕವಾಗಿವೆ.

ಇಂದಿನ ಮೊಬೈಲ್ ಇಂಟರ್ನೆಟ್ ಯುಗದಲ್ಲಿ ಮಕ್ಕಳು ಮೊಬೈಲ್ (ಆನ್‌ಲೈನ್) ಆಟಗಳ ಗೀಳಿನಿಂದ ದಾಸರಾಗಿದ್ದರೆ, ದೊಡ್ಡವರು ಸೋಶಿಯಲ್ ಮೀಡಿಯಾ ಅಂತಹ ಪಿಡುಗಿಗೆ ದಾಸರಾಗಿ ಗಂಟೆಗಟ್ಟಲೆ ಕೂತಲ್ಲೇ ಕೂತು, ಬಿಸಿಲಿಗೆ ಮೈಯೊಡ್ಡದೆ, ಬೆವರು ಸುರಿಸದೆ, ಬೊಜ್ಜುತನ ಬೆಳೆಸಿಕೊಂಡು ಅದರಿಂದ ನಾನಾ ತರಹದ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕೇವಲ ದೈಹಿಕ ಕಾಯಿಲೆಗಳಲ್ಲದೇ ಮೊಬೈಲ್ ಗೀಳಿನಿಂದಾಗಿ ಅನೇಕ ತರಹದ ಮಾನಸಿಕ ಕಾಯಿಲೆಗಳಿಂದ ಬಳಲುವವರ ಸಂಖ್ಯೆಯು ಹೆಚ್ಚಾಗುತ್ತಿದೆ. ಮತ್ತು ಸಾಮಾಜಿಕ ವಿರೋಧಿ ನಡುವಳಿಕೆಯು ಕಾಣಸಿಗುತ್ತಿದೆ.

ಅಂಕಿ–ಅಂಶಗಳ ಪ್ರಕಾರ ಅಮೇರಿಕಾ ದೇಶದಲ್ಲಿ ಸಂಭವಿಸುವ 40%ರಷ್ಟು ಸಾವುಗಳು, ನೇರವಾಗಿ ಅಥವಾ ಪರೋಕ್ಷವಾಗಿ ದೈಹಿಕ ನಿಷ್ಕ್ರೀಯವಾಗಿರುವ ಜೀವನಶೈಲಿಯಿಂದಾಗಿದೆ ಎಂದು ತಿಳಿದು ಬರುತ್ತದೆ.

ನಮ್ಮ ಆರೋಗ್ಯವನ್ನು ಸುಸ್ಥಿತಿಯಲ್ಲಿಡಲು ಡಬ್ಲ್ಯೂಎಚ್‌ಓ ಕೆಲವು ಸಲಹೆಗಳನ್ನು ಶಿಫಾರಸು ಮಾಡಿದೆ.

* 6–17ವರ್ಷ ವಯಸ್ಸಿನವರು ಪ್ರತಿನಿತ್ಯ ಕನಿಷ್ಠ 60 ನಿಮಿಷ (1ಗಂಟೆ) ಕ್ರೀಡೆ/ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಇದರಿಂದ ಅವರ ಸ್ನಾಯು ಮೂಳೆ ನರಮಂಡಲ ಮೆದುಳಿನ ಬೆಳವಣಿಗೆಯೊಂದಿಗೆ ದೇಹದ ತೂಕವನ್ನು ಸಮತೋಲನದೊಂದಿಗೆ ಬೊಜ್ಜುತನವನ್ನು ದೂರವಿಡಿಸುತ್ತದೆ. ಇದಷ್ಟೇ ಅಲ್ಲದೆ, ಅವರ ಸಾಮಾಜಿಕ ಬೆಳವಣಿಗೆ, ಅತ್ಮಸ್ಥೈರ್ಯ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಮತ್ತು ದುಶ್ಚಟಗಳಿಂದ ದೂರವಿಡಲು ಸಹಕಾರಿಯಾಗಿದೆ.

* 18–64 ವರ್ಷದವರು ವಾರಕ್ಕೆ 150 ನಿಮಿಷದಷ್ಟು ಮಧ್ಯಮ ತೀವ್ರತೆಯ ಕ್ರೀಡೆ / ದೈಹಿಕ ತಾಲೀಮು ಅಥವಾ 75 ನಿಮಿಷದಷ್ಟು ತೀವ್ರತೆಯ ದೈಹಿಕ ತಾಲೀಮಿನಲ್ಲಿ ತೊಡಗಬೇಕು

* 64ವರ್ಷಕ್ಕಿಂತ ಮೇಲ್ಪಟ್ಟವರು ಯಾವುದೇ ರೋಗದ ಅನುಪಸ್ಥಿತಿಯಲ್ಲಿದ್ದರೆ ವಾರಕ್ಕೆ 150 ನಿಮಿಷಗಳ ಕಾಲ ಮಧ್ಯಮ ತೀವ್ರತೆಯ ದೈಹಿಕ ತಾಲೀಮು ಮಾಡಬೇಕು. ಅಥವಾ ವೈದ್ಯರ ಸಲಹೆ ಮೇರೆಗೆ ಮಾಡಬಹುದು.

* ಸ್ನಾಯು ಗಟ್ಟಿಗೊಳಿಸುವ ದೈಹಿಕ ತಾಲಿಮುಗಳಿಂದ ಸ್ನಾಯು ಕ್ಷೀಣತೆಯನ್ನು ಕಡಿಮೆ ಮಾಡಬಹುದಲ್ಲದೇ, ಅಸ್ಥಿರಂದ್ರತೆ (osteoporosis)ಯನ್ನು ತಡೆಗಟ್ಟಬಹುದು.

* ಒಂದು ಅಧ್ಯಾಯದ ಪ್ರಕಾರ ಪ್ರತಿನಿತ್ಯ ಕನಿಷ್ಠ 30 ನಿಮಿಷ ವಾಕಿಂಗ್ ಮಾಡುವುದರಿಂದ ಶೇ.30ವರೆಗೆ ಮರೆಗುಳಿಕೆ (Dementia) ಕಾಯಿಲೆಯನ್ನು ತಡೆಯಬಹುದು.

ಇದಷ್ಟೇ ಅಲ್ಲದೇ, ಹೆಣ್ಣು ಮಕ್ಕಳ ಗರ್ಭಾವಸ್ಥೆಯಲ್ಲಾಗುವ ಸಕ್ಕರೆ ಕಾಯಿಲೆ, ರಕ್ತದೊತ್ತಡ ರಕ್ತಸ್ರಾವ ಅಂತಹ ತೊಡಕುಗಳನ್ನು ತಪ್ಪಿಸಬಹುದು.

ನಿಯಮಿತವಾಗಿ ಕ್ರೀಡೆ ದೈಹಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ನಮ್ಮ ದೇಹದಲ್ಲಿ ಸೆರಟೋನಿನ್ ಎಂಡೋರಫಿನ್, ಡೊಪನಿನ್ ಅಂತಹ ನರರಾಸಾಯನಿಕಗಳು ಉತ್ಪತ್ತಿಯಾಗಿ, ಖಿನ್ನತೆ, ಆತಂಕ ಅಂತಹ ಅನೇಕ ಮಾನಸಿಕ ಕಾಯಿಲೆಗಳಿಂದ ದೂರವಿಟ್ಟು ಯವಾಗಲು ಉತ್ಸಾಹ, ಖುಷಿಯಿಂದಿರಲು ಸಹಾಯ ಮಾಡುತ್ತವೆ. ಇವಷ್ಟೇ ಅಲ್ಲದೇ ಉಖಔಈಖಿಊ ಈಂಆಖಿಔಖಖ ಎಂಬ ರಾಸಾಯನಿಕಗಳನ್ನು ಉತ್ಪಾದಿಸಿ ನಮ್ಮ ಮೆದುಳಿನ ಬೆಳವಣಿಗೆಗೆ (HIPPO CAMPUS) ನೆನಪಿನ ಶಕ್ತಿ, ಏಕಾಗ್ರತೆಯನ್ನು ಕೇವಲ ಚಿಕ್ಕ ವಯಸ್ಸಿನಷ್ಟೇ ಅಲ್ಲದೇ ಮಧ್ಯಮ ವಯಸ್ಕರಲ್ಲೂ ಸಾಧ್ಯ ಎಂಬುದು ವೈಜ್ಞಾನಿಕ ಅಧ್ಯಯನದಿಂದ ಸಾಬೀತಾಗಿದೆ


ನಮ್ಮ ದೇಹದ ಮೇಲೆ ಇಷ್ಟೆಲ್ಲಾ ಲಾಭದಾಯಕ ಅಂಶಗಳನ್ನು ಹೊಂದಿರುವ ಕ್ರೀಡೆಗಳನ್ನು ಅಥ–'ವಾ ಯಾವುದೇ ತರಹದ ದೈಹಿಕ ಚಟುವಟಿಕೆಗಳನ್ನು (ಯೋಗ, ಜಿಮ್, ವಾಕಿಂಗ್) ಅದು ನಮ್ಮ ಹೃದಯ ಬಡಿತವನ್ನು ಹೆಚ್ಚಿಸಿ, ಬೆವರು ಉತ್ಪಾದಿಸುವಂತಹದನ್ನು ನಿಯಮಿತವಾಗಿ ಜೀವನ ಶೈಲಿಯಲ್ಲಿ ಅಳವಡಿಸಿಕೊಳ್ಳಬೇಕು.

ಹೊಂ ವರ್ಕ್ ಅಥವಾ ಪರೀಕ್ಷಾ ಮನೋಭಾವ ಹೆಚ್ಚಾಗಿರುವ ಇತ್ತೀಚಿನ ಎಲ್ಲಾ ಶಾಲೆಗಳಲ್ಲಿ, ಕಾಲೇಜುಗಳಲ್ಲಿ ಪ್ರತಿದಿನ ಮಕ್ಕಳಿಗೆ 1 ಗಂಟೆಯಾದರೂ ಕಡ್ಡಾಯವಾಗಿ ಕ್ರೀಡೆ/ದೈಹಿಕ ಚಟುವಟಿಕೆಗಳಿಗೆ ಮೀಸಲಿಟ್ಟು ಅವರ ಸರ್ವತೋಮುಖ ಬೆಳವಣಿಗೆಗೆ ಪ್ರಾಮುಖ್ಯತೆ ಬೆಳೆಸಬೇಕು.

" we do not stop exercising / playing because we stop playing / exercising."



- Dr Nandini Muchchandi
Associate Professor and Fellowship in community and mental health
Department of Biochemistry
BLDE, Shri B M Patil medical college hospital and research centre, vijaypur



# ಯೋಗೇಶ್ವರ ಯಾಜ್ಞವಲ್ಕ್ಯರು ಶ್ರೇಷ್ಠ ಋಷಿ ಮುನಿಗಳು :ದಿವಾಕರ ಶಂಕರ ದೀಕ್ಷಿತರು

**ಉದಯರಶ್ಮಿ ನ್ಯೂಸ್**



ವಿಜಯಪುರ: ಸನಾತನ ಹಿಂದೂ ಸಂಸ್ಕೃತಿಗಳಲ್ಲಿ ಯೋಗೇಶ್ವರ ಯಾಜ್ಞವಲ್ಕ್ಯ ಋಷಿಗಳ ಸರಿ ಸಮಾನರು ಮತ್ತೊಬ್ಬರಿಲ್ಲ ಎಂದು ಮುರುಗೋಡ ಕೆಂಗೇರಿ ಮೂಲ ಸಂಸ್ಥಾನ ಪೀಠಾಧ್ಯಕ್ಷರಾದ ಪ. ಪೂ. ಶ್ರೀ ದಿವಾಕರ ಶಂಕರ ದೀಕ್ಷಿತರು ನುಡಿದರು.

ಅವರು ರವಿವಾರ ನಗರದ ಹೊರ ವಲಯದಲ್ಲಿರುವ ಶ್ರೀ ಶಿವ ಚಿದಂಬರ ದೇವಸ್ಥಾನದಲ್ಲಿ ಯೋಗೇಶ್ವರ ಯಾಜ್ಞವಲ್ಕ್ಯರ ಜಯಂತಿ ಹಾಗೂ ವಿಜಯಪುರದಿಂದ ಶ್ರೀ ಕ್ಷೇತ್ರ ಮುರಗೋಡಕ್ಕೆ ಪಾದಯಾತ್ರೆಯ ರಜತ ಮಹೋತ್ಸವದಂಗವಾಗಿ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ನಾವೆಲ್ಲ ಯೋಗೇಶ್ವರ ಯಾಜ್ಞವಲ್ಕ್ಯರ ಸಂತತಿಗಳೇ ಭಗವಂತನ ಅವತಾರಿ ಶ್ರೀ ಶಿವ ಚಿದಂಬರ ನಾಮಸ್ಮರಣೆ ಎಲ್ಲರೂ ತಪ್ಪದೇ ಮಾಡಿರಿ ಅದುವೇ ಜೀವನ್ಮುಕ್ತಿಗೆ ದಾರಿದೀಪವಾಗಿದೆ ಎಂದರು.

ಕಳೆದ 25 ವರ್ಷಗಳಿಂದ ವಿಜಯಪುರದ ಭಕ್ತ ವೃಂದ ಪಾದಯಾತ್ರೆ ಮೂಲಕ ಶ್ರೀ ಕ್ಷೇತ್ರ ಮುರಗೋಡಕ್ಕೆ ಆಗಮಿಸಿ ಅಲ್ಲಿ ನಡೆಯುವ ಮಹೋತ್ಸವ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಲಿರುವದು ಶ್ರೀ ಚಿದಂಬರ ಕೃಪೆಗೆ ಪಾತ್ರವಾಗಿದೆ.

ಸಿಂದಗಿಯ ಭೀಮಾಶಂಕರ ಮಠದ ದತ್ತಪ್ಪಯ್ಯ ಶ್ರೀಗಳು ತಮ್ಮ ಆಶೀರ್ವಚನದಲ್ಲಿ ವಿಜಯಪುರದ ಶಿವ ಚಿದಂಬರನ ಭಕ್ತಾಧಿಗಳು ಪಾದಯಾತ್ರೆ ಮೂಲಕ ಮುರಗೋಡಕ್ಕೆ ತೆರಳಿ ತಮ್ಮ ಭಕ್ತಿ,ಭಾವ ತೋರುವ ಸತ್ ಸಂಪ್ರದಾಯ ಮುಂದುವರೆಸಿಕೊಂಡು ಹೋಗಿ ಎಲ್ಲರಿಗೂ ಸುಖ: ಶಾಂತಿ, ಸಮೃದ್ದ ಜೀವನ ನಡೆಸಲು ಶಿವ ಚಿದಂಬರನ ಕೃಪೆಯಾಗಲಿ ಎಂದು ತಮ್ಮ ಆರ್ಶಿವಚನದಲ್ಲಿ ನುಡಿದರು.

ಆರಂಭದಲ್ಲಿ ಹಿರಿಯರಾದ ಮೊಹರೆ ಅವರು ಸ್ವಾಗತ, ಪ್ರಾಸ್ತವಿಕವಾಗಿ ಮಾತನಾಡಿ ಪಾದಯಾತ್ರೆಯ ಮಹತ್ವನ್ನು ಸವಿಸ್ತಾರವಾಗಿ ವಿವರಿಸಿದರು.

ಸತತ 25 ವರ್ಷಗಳ ಪರ್ಯಂತ ಪಾದಯಾತ್ರೆ ಸಾಗುವ ಮಾರ್ಗ ಮಧ್ಯದಲ್ಲಿ ಭಕ್ತಾಧಿಗಳಿಗೆ ಉಪಹಾರ, ಊಟದ ವ್ಯವಸ್ಥೆ ಮತ್ತು ವಿಶ್ರಾಂತಿ ವ್ಯವಸ್ಥೆ ಕೈಕೊಂಡ ಭಕ್ತಾದಿ ದಂಪತಿಗಳಿಗೆ ಹಾಗೂ ವಿಜಯಪುರ, ಮುದ್ದೇಬಿಹಾಳ ಸಂಚಾಲಕರಿಗೆ ಮತ್ತು ಪಾದಯಾತ್ರೆಯುದ್ದಕ್ಕೂ ಔಷಧಿ, ನೀರು, ವಾಹನ ವ್ಯವಸ್ಥೆ ಮಾಡಿದ ಎಲ್ಲರಿಗೂ ಮುರಗೋಡ ದಿವಾಕರ ದೀಕ್ಷಿತರು ಮತ್ತು ಸಿಂದಗಿಯ ಪರಮ ಪೂಜ್ಯ ಶ್ರೀ ಭೀಮಾಶಂಕರ ಮಠದ ದತ್ತಪ್ಪಯ್ಯ ಗುರುಗಳು ಸನ್ಮಾನಿಸಿದರು.

ವೇದಿಕೆ ಮೇಲೆ ಶಿವ ಚಿದಂಬರ ಸೇವಾ ಸಮೀತಿ ಉಪಾಧ್ಯಕ್ಷರಾದ ಮಾಧು ಜೋಶಿ, ಪಾದಯಾತ್ರೆ ಪ್ರಮುಖ ಸಂಚಾಲಕ ರಾಘು ಜೋಶಿ ಸಂಕನಾಳ ಮತ್ತಿತರರು ಉಪಸ್ಥಿತರಿದ್ದರು

ಈ ಸಂದರ್ಭದಲ್ಲಿ, ಶಂಕರಭಟ್ಟ ಅಗ್ನಿಹೋತ್ರಿ, ಚಿದಂಬರ ಭಟ್ಟ ಜೋಶಿ, ಅನೀಲ ಜೋಶಿ, ಮಂಜುನಾಥ ಜೋಶಿ, ಸುಧೀಂದ್ರ ಜೋಶಿ, ದೀಪಕ ಜೋಶಿ, ಮಾಲತೇಶ ಕುಲಕರ್ಣಿ, ವಿಜಯ ಜೋಶಿ, ಸಚಿನ ಜೋಶಿ, ಪ್ರಾಣೇಶ ಕುಲಕರ್ಣಿ,ವಿ.ಸಿಕುಲಕರ್ಣಿ, ಪಣೀಂಧ್ರ ಜೋಶಿ, ಲಕ್ಷ್ಮೀಕಾಂತ ಕುಲಕರ್ಣಿ ಮುಂತಾದವರು ಇದ್ದರು.

# ಬೀದಿ ನಾಟಕ ಮೂಲಕ ರಕ್ತದಾನದ ಮಹತ್ವ ಕುರಿತು ಜನಜಾಗೃತಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ರೋಗಶಾಸ್ತ್ರ ವಿಭಾಗದ ವತಿಯಿಂದ ಶುಕ್ರವಾರ ಬೀದಿ ನಾಟಕದ ಮೂಲಕ ರಕ್ತದಾನದ ಮಹತ್ವದ ಕುರಿತು ಜನ ಜನಜಾಗೃತಿ ಮೂಡಿಸಲಾಯಿತು.

ರಕ್ತ ದಾನ ಜಾಗೃತಿ ಮತ್ತು ರಕ್ತ ದಾನಿಗಳಿಗೆ ಕೃತಜ್ಞತೆ ಅರ್ಪಿಸುವ ಕಾರ್ಯಕ್ರಮ ಘೋಷಣೆಯಡಿ ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯ ಎದುರು, ಶ್ರೀ ಸಿದ್ದೇಶ್ವರ ದೇವಸ್ಥಾನದ ಮುಂಭಾಗ, ಗಾಂಧಿ ಚೌಕ್ ಹಾಗೂ ಕೇಂದ್ರ ಬಸ್ ನಿಲ್ದಾಣದಲ್ಲಿ ಬೀದಿ ನಾಟಕ ಪ್ರದರ್ಶನ ನಡೆಯಿತು.

ಈ ಬೀದಿ ನಾಟಕದಲ್ಲಿ ಪಾಲ್ಗೊಂಡ ಎಂಬಿಬಿಎಸ್ ವಿದ್ಯಾರ್ಥಿಗಳು ರಕ್ತದಾನದ ಕುರಿತು ಜಾಗೃತಿ ಮತ್ತು ರಕ್ತದಾನಿಗಳಿಗೆ ಧನ್ಯವಾದ ಅರ್ಪಿಸಿದರು. ಅಲ್ಲದೇ, ರಕ್ತದಾನಿಗಳಿಗೆ ಧನ್ಯವಾದ ಪತ್ರಗಳನ್ನು ವಿತರಿಸಿದರು.

ಇದೇ ವೇಳೆ ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರ ಹಾಗೂ ಬೀದಿ ನಾಟಕದ ಸಂದರ್ಭದಲ್ಲಿ ಸಾರ್ವಜನಿಕರಿಗಾಗಿ ರಕ್ತದ ಗುಂಪು ಪರೀಕ್ಷೆಯನ್ನು ಉಚಿತವಾಗಿ ಮಾಡಲಾಯಿತು.

ಈ ಸಂದರ್ಭದಲ್ಲಿ ವಿವಿ ಕುಲಪತಿ ಡಾ. ಆರ್. ಎಸ್. ಮುಧೋಳ, ಪ್ರಾಂಶುಪಾಲ ಡಾ. ಅರವಿಂದ ಪಾಟೀಲ, ರೋಗಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಸುರೇಖಾ ಹಿಪ್ಪರಗಿ, ರಕ್ತಕೇಂದ್ರದ ಅಧಿಕಾರಿ ಡಾ. ಪ್ರಕಾಶ ಪಾಟೀಲ, ಡಾ. ಮಮತಾ ಕೆ. ಡಾ.ವಿಜಯಲಕ್ಷ್ಮಿ ಪಾಟೀಲ, ಡಾ. ಸತೀಶ ಅರಕೇರಿ ಮುಂತಾದವರು ಉಪಸ್ಥಿತರಿದ್ದರು.

# ರಕ್ತದಾನ ಮಾಡಿ ಜೀವ ರಕ್ಷಣೆಗೆ ಮುಂದಾಗಿ :ಕಾಪಸೆ

**ಉದಯರಶ್ಮಿ ನ್ಯೂಸ್**



ಝಳಕಿ: ಗ್ರಾಮೀಣ ಭಾಗದ ಜನರು ಬಡತನದಿಂದ ನಿರಾಶ್ರಿತರಾಗಿರುತ್ತಾರೆ ಈ ಉದೇಶದಿಂದ ಗ್ರಾಮೀಣ ಭಾಗದ ಬಡ ಜನರ ಸೇವೆ ಮಾಡಲು ಡಾ.ಎಲ್.ಎಚ್ ಬಿದರಿ ಅವರು ಮುಂದಾಗಿದ್ದಾರೆ ಆದರಿಂದ ಎಲ್ಲ ಜನರು ಇದರ ಸದುಪಯೋಗ ಪಡಿಸಿಕೊಳ್ಳಿ ಎಂದು ಯುವ ಮುಖಂಡ ರಾಘವೇಂದ್ರ ಕಾಪಸೆ ಹೇಳಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ವಿಜಯಪುರ ಡಾ.ಬಿದರಿಯವರ ಅಶ್ವಿನಿ ಆಸ್ಪತ್ರೆ ಹಾಗೂ ನ್ಯೂ ಅಶ್ವಿನಿ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್,ಝಳಕಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದೊಂದಿಗೆ ಬೃಹತ್ ಉಚಿತ ಆರೋಗ್ಯ ತಪಾಸಣಾ ಹೃದಯ ತಪಾಸಣೆ ಹಾಗೂ ರಕ್ತದಾನ ಶಿಬಿರದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ದಾನಗಳಲ್ಲಿ ರಕ್ತದಾನ ಮಹಾದಾನ ಜನರ ಜೀವ ರಕ್ಷಣೆಗೆ ರಕ್ತ ಅತ್ಯವಶ್ಯಕವಾಗಿದ್ದು, ರಕ್ತದ ಅವಶ್ಯಕತೆ ಇರುವ ವ್ಯಕ್ತಿಗಳಿಗೆ ರಕ್ತದಾನ ಮಾಡುವುದರ ಮೂಲಕ ಎಲ್ಲರೂ ಜನರ ಅಮೂಲ್ಯವಾದ ಜೀವ ರಕ್ಷಣೆಗೆ ಮುಂದಾಗಬೇಕು ಎಂದರು.

ಡಾ.ಎಲ್.ಎಚ್.ಬಿದರಿ ಮಾತನಾಡಿ, ಮಾನವನಿಗೆ ಆಕಸ್ಮಿಕ ಸಂದರ್ಭಗಳಲ್ಲಿ ತುರ್ತಾಗಿ ಅಗತ್ಯವಾಗಿ ಬೇಕಾಗುವ ರಕ್ತವು ಅಮೂಲ್ಯ ಜೀವ ಉಳಿಸುವ ವಸ್ತುವಾಗಿದೆ. ಇದನ್ನರಿತು ಸಮಾಜದ ಪ್ರತಿಯೊಬ್ಬ ಆರೋಗ್ಯವಂತರು ರಕ್ತದಾನ ಮಾಡುವ ಮೂಲಕ ಮಾದರಿಯಾಗಬೇಕು. ರಕ್ತದಾನಮಾಡಿದರೆ ತಮ್ಮ ದೇಹದ ಕೊಬ್ಬಿನಾಂಶ ಕಡಿಮೆಯಾಗಿ ಹೊಸ ರಕ್ತ ಉತ್ಪತ್ತಿಯಾಗಲಿದೆ ಎಂದರು.

ಗ್ರಾಪಂ.ಮಾಜಿ ಅಧ್ಯಕ್ಷ ಸಣ್ಣಪ್ಪ ತಳವಾರ, ಅಣ್ಣಪ್ಪ ತಳವಾರ,ನಾರಾಯಣ ಜಾಹಾಗೀರದಾರ, ಕಾಲೇಜ ಪ್ರಾಂಶುಪಾಲ ಕಬ್ಬಾಡೆ ಸೇರಿದಂತೆ ನೂರಾರು ಜನರು ಭಾಗಿಯಾಗಿದ್ದರು.

# ಬದುಕಿನ ವೈಭವಕ್ಕೆ ಬೇಕಾಗಿದೆ ಹೊಸ ಭಾಷ್ಯ

**ಉದಯರಶ್ಮಿ ದಿನಪತ್ರಿಕೆ**

**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ

ಬದುಕಿನ ವೈಭವವನ್ನು ಕೈಯಲ್ಲಿ ಕಟ್ಟಿರುವ ದುಬಾರಿ ವಾಚುಗಳಲ್ಲಿ, ಹಿಡಿದಿರುವ ಮೊಬೈಲುಗಳಲ್ಲಿ ನೋಡಬೇಡ.

ವಾಚುಗಳು ಸಮಯವನ್ನು ತೋರಿಸುತ್ತವೆಯೇ ಹೊರತು ನಮ್ಮ ಬದುಕನ್ನು ಬದಲಿಸುವ ಶಕ್ತಿ ಇರುವುದು ಕೇವಲ ಸಮಯಕ್ಕೆ ಹೊರತು ನಾವು ಕಟ್ಟಿರುವ ವಾಚುಗಳಿಗಲ್ಲ. ಮೊಬೈಲ್ ಕೂಡ ಇರುವುದು ನಮ್ಮ ಉಪಯೋಗಕ್ಕೆ ಹೊರತು ತೋರಿಕೆಯ ಡಂಬಾಚಾರಕ್ಕಲ್ಲ

ಬದುಕಿನ ವೈಭವವನ್ನು ಐಷಾರಾಮಿ ಪ್ರಯಾಣಗಳಲ್ಲಿ ನೋಡಬೇಡ, ಐಷಾರಾಮಿ ವಾಹನ ನಮ್ಮನ್ನು ನಮ್ಮ ಗಮ್ಯಸ್ಥಾನಕ್ಕೆ ತಲುಪಿಸುತ್ತದೆಯೇ ಹೊರತು ನಮ್ಮ ಬದುಕಿನ ದಿಕ್ಕನ್ನು ನಿರ್ಧರಿಸುವುದಿಲ್ಲ.



ಬದುಕಿನ ವೈಭವ ನೀನು ತಿನ್ನುವ ಆಹಾರದ ಉತ್ಕೃಷ್ಟತೆಯಲ್ಲಿಲ್ಲ... ಒಳ್ಳೆಯ ಭೋಜನ ನಿನ್ನ ಆರ್ಥಿಕತೆಯ ಔನ್ನತ್ಯವನ್ನು ನಿರ್ಧರಿಸುತ್ತದೆಯೇ ಹೊರತು ನಿನ್ನ ಆರೋಗ್ಯವನ್ನು ಅಲ್ಲ.

ಬದುಕಿನ ವೈಭವವನ್ನು ಬ್ರಾಂಡೆಡ್ ಬಟ್ಟೆಗಳ ಮೇಲೆ, ಮೈಮೇಲೆ ಹೇರಿಕೊಂಡಿರುವ ಚಿನ್ನ ಮತ್ತು ವಜ್ರದ ಒಡವೆಗಳ, ಬ್ಯಾಂಕಿನಲ್ಲಿರುವ ಅಪಾರ ಮೊತ್ತದ ಹಣದ ಮೇಲೆ ಮೇಲೆ ನಿರ್ಧರಿಸದಿರು..... ಕ್ಷಣಿಕ ತೃಪ್ತಿಯನ್ನು, ತುಸು ಅಹಂಭಾವವನ್ನಲ್ಲದೆ ಅದಾವುದೂ ನಿನಗೆ ಮಾನಸಿಕ ತೃಪ್ತಿಯನ್ನು ತಂದುಕೊಡುವುದಿಲ್ಲ.

ಬದುಕಿನ ವೈಭವವನ್ನು ಬ್ರಾಂಡೆಡ್ ಶೂ ಚಪ್ಪಲಿಗಳಲ್ಲಿ ನೋಡಬೇಡ.... ಅದೆಷ್ಟೇ ಹಣ ಖರ್ಚು ಮಾಡಿ ದುಬಾರಿ ಹರಳುಗಳ ಅಲಂಕಾರ ಮಾಡಿದರೂ ಅವುಗಳನ್ನು ಕಾಲಲ್ಲಿ ಮೆಟ್ಟುತ್ತೇವೆಯೇ ಹೊರತು ತಲೆಯ ಮೇಲೆ ಇಟ್ಟುಕೊಳ್ಳುವುದಿಲ್ಲ.

ಬದುಕಿನ ವೈಭವವನ್ನು, ಐಷಾರಾಮಿ ಹಾಸಿಗೆಗಳಲ್ಲಿ, ವಾತಾನುಕೂಲಿತ ಕೋಣೆಗಳಲ್ಲಿ ನೋಡಬೇಡ ಅವು ನಿನ್ನ ಸಿರಿವಂತಿಕೆಯನ್ನು ಸೂಚಿಸುತ್ತವೆಯೇ ಹೊಡೆದು ನಿರಾತಂಕವಾದ ಸೊಂಪಾದ ನಿದ್ರೆಯನ್ನಲ್ಲ.


ಬದುಕಿನ ಯಾವುದೇ ವೈಭವಗಳನ್ನು ಅಂಗಡಿಯಲ್ಲಿ ಕೊಳ್ಳಲಾಗುವುದಿಲ್ಲ!!!

ಬದುಕಿನ ಯಾವುದೇ ವೈಭವಗಳನ್ನು ಕೊಡುಗೆಯಾಗಿ ನೀಡಲು ಸಾಧ್ಯವಿಲ್ಲ!!!

ಬದುಕಿನ ಯಾವುದೇ ವೈಭವಗಳು ಐಷಾರಾಮಿ ಔತಣಕೂಟಗಳಲ್ಲಿ ಸಿಗುವುದಿಲ್ಲ!!!

ಬದುಕಿನ ಯಾವುದೇ ವೈಭವಗಳು ಐಷಾರಾಮಿ ವಸ್ತುಗಳಲ್ಲಿ ದೊರೆಯುವುದು ಸಾಧ್ಯವೇ ಇಲ್ಲ!!!

ಬದುಕಿನ ನಿಜವಾದ ವೈಭವ ಇರುವುದು ತಲೆಯ ಮೇಲೆ ಅಪ್ಪ ಅಮ್ಮನ ಆಶೀರ್ವಾದದಲ್ಲಿ, ತಲೆಯ ಮೇಲಿರುವ ನಮ್ಮದೇ ಪುಟ್ಟ ಸೂರಿನಲ್ಲಿ,ನಮ್ಮ ಆರೋಗ್ಯದಲ್ಲಿ, ನಮ್ಮ ಸೌಹಾರ್ದಯುತ ಸಂಬಂಧಗಳಲ್ಲಿ,



ನಮ್ಮ ಸ್ನೇಹಿತರ ಜೊತೆಗಿನ ಆತ್ಮೀಯ ಒಡನಾಟದಲ್ಲಿ, ಸಂಗಾತಿಯೊಂದಿಗೆ ಸ್ನೇಹ ಪ್ರೇಮಗಳಲ್ಲಿ,ಮಕ್ಕಳೊಂದಿಗೆ ಆಟ ಪಾಠಗಳಲ್ಲಿ, ಸಂತಸದಲ್ಲಿ, ವೈಭವವಿರುವುದು ಆತ್ಮೀಯರ ಅಪ್ಪುಗೆಯಲ್ಲಿ, ವೈಭವ ಇರುವುದು ಸಂಗಾತಿಯ ಮತ್ತು ಮಕ್ಕಳ ಮುದ್ದಿನಲ್ಲಿ.

ಬದುಕಿನ ನಿಜವಾದ ವೈಭವ ಇರುವುದು ನಮ್ಮವರ ಪ್ರೀತಿಯಲ್ಲಿ, ನಾವು ಗಳಿಸುವ ಗೌರವದಲ್ಲಿ, ವೈಭವವಿರುವುದು ನಮ್ಮ ಮೊಮ್ಮಕ್ಕಳೊಂದಿಗೆ ಒಡನಾಡುವಲ್ಲಿ.

ಬದುಕಿನ ಐಷಾರಾಮಿ ವಸ್ತುಗಳು ಬಾಹ್ಯಾಡಂಬರದ ವಸ್ತುಗಳಲ್ಲಿಲ್ಲ... ಮನಸ್ಸಿಗೆ ಉಲ್ಲಾಸಕೊಡುವ ಚೇತೋಹಾರಿ ಬದುಕಿನಲ್ಲಿದೆ.

ಇದರ ಅರಿವಿಲ್ಲದ ಎಷ್ಟೋ ಜನ ತಮಗಿಲ್ಲದುದನ್ನು ಕಂಡು ಕರುಬುತ್ತಾರೆ, ಖ್ಯಾತ ಕವಿ ಗೋಪಾಲಕೃಷ್ಣ ಅಡಿಗರ ಕವನದಲ್ಲಿನ ಸಾಲುಗಳಂತೆ

“ಇರುವುದೆಲ್ಲವ ಬಿಟ್ಟು ಇರದುದರೆಡೆಗೆ ತುಡಿವುದೇ ಜೀವನ” ಎಂಬಂತೆ ಹಲುಬುತ್ತಾರೆ.



94ರ ಹರೆಯದ ಹಾಲಿವುಡ್ ನ ಕ್ಲಿಂಟ್ ಈಸ್ಟ ವುಡ್ ಎಂಬ ನಟ ಹೇಳಿರುವ ಬದುಕಿನ ನಿಜವಾದ ವೈಭವ ನಮ್ಮವರ ಪ್ರೀತಿ ವಿಶ್ವಾಸ ಸ್ನೇಹಿತರ ಒಡನಾಟ ಆತ್ಮೀಯರ ಅಪ್ಪುಗೆ ಮತ್ತು ಮುದ್ದುಗಳಲ್ಲಿದೆ ಎಂಬ ಮಾತುಗಳು ನನ್ನನ್ನು ಈ ಚಿಂತನೆಗೆ ಈಡು ಮಾಡಿದವು.... ತಿಳಿದವರ, ಜ್ಞಾನಿಗಳ ಒಂದು ಮಾತು ಒಂದಿಡೀ ಲೇಖನಕ್ಕೆ ಆಕರವಾಗುತ್ತದೆ ಎಂದರೆ ಅಚ್ಚರಿಯೇನಲ್ಲ.



ಬಾಹ್ಯಾಡಂಬರದ ಸೆಳೆತಗಳನ್ನು ಬಿಟ್ಟು, ಇರುವುದನ್ನು ಇರುವಂತೆಯೇ ಒಪ್ಪಿಕೊಂಡು ಅಪ್ಪಿಕೊಳ್ಳುವುದರಲ್ಲಿ ಮಾನವ ಜನ್ಮದ ಸಾರ್ಥಕತೆ ಇದೆ ಎಂಬುದನ್ನು ಅರಿತು ಅಂತೆಯೇ ಬಾಳಿ ಬದುಕೋಣ... ಅಲ್ಲವೇ?

# ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭಾರತೀಯ ಜನತಾ ಪಾರ್ಟಿ ವಿಜಯಪುರ ಜಿಲ್ಲಾ ಘಟಕದ ವತಿಯಿಂದ ರಾಜ್ಯ ಕಾಂಗ್ರೆಸ್ ಸರ್ಕಾರದ ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆ ಹೇ–ರಿದ್ದು ಖಂಡಸಿ ಬಿಜೆಪಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಗಾಂಧಿವೃತ್ತದಿಂದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದವರೆಗೂ ಬೈಕ್‌ಗೆ ಹಗ್ಗಕಟ್ಟಿ ಎಳೆದುಕೊಂಡು ಬರುವುದ ಮೂಲಕ ವಿನೂತನ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಓಬಿಸಿ ಮೋರ್ಚಾ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ ಮಾತನಾಡಿ, ಕರ್ನಾಟಕ ರಾಜ್ಯ ಇತಿಹಾಸದಲ್ಲಿ ಇಂದಿನ ಕಾಂಗ್ರೆಸ್ ಸರ್ಕಾರದಷ್ಟು ಜನವಿರೋಧಿ ಎಂದು ಕಂಡಿಲ್ಲ. ಸುಳ್ಳು ಭರವಸೆ ಹಾಗೂ ಯೋಜನೆಗಳನ್ನು ಪೂರೈಸಲಾಗದೇ ರಾಜ್ಯದ ಖಜಾನೆಯನ್ನು ಬರಿದು ಮಾಡಿಕೊಂಡಿರುವ ಈ ಸರ್ಕಾರ ಜನಕಲ್ಯಾಣವನ್ನು ಮರೆತು ಭ್ರಷ್ಟಾಚಾರದಲ್ಲಿ ತೊಡಗಿ ರಾಜ್ಯದ ಜನತೆಯನ್ನು ಸಂಕಷ್ಟಕ್ಕೆ ತಳ್ಳುತ್ತಿದೆ. ಕೂಡಲೇ ಪೆಟ್ರೋಲ್ ಡಿಸೇಲ್ ಏರಿಕೆಯನ್ನು ಕಡಿತಗೊಳಿಸಿ ಈ ನಿರ್ಧಾರವನ್ನು ಹಿಂಪಡೆಯಬೇಕು.

ಈ ಸಂದರ್ಭದಲ್ಲಿ ದೇವರ ಹಿಪ್ಪರಗಿ ಮತಕ್ಷೇತ್ರದ ಮಾಜಿ ಶಾಸಕರಾದ ಸೋಮನಗೌಡ ಪಾಟೀಲ ಸಾಸನೂರ ಮಾತನಾಡಿ, ರಾಜ್ಯದ ಜನತೆಗೆ ನೆಮ್ಮದಿಯ ಬದುಕು ನೀಡಲು ಸಾಧ್ಯವಿಲ್ಲದಿದ್ದರೆ, ಈ ಸರ್ಕಾರ ಅಧಿಖಾರ ಬಿಟ್ಟು ತೊಲಗಲಿ, ಅಗತ್ಯ ವಸ್ತುಗಳ ಬೆಲೆಗಳಣ್ನು ಏರಿಸುವ ಮೂಲಕ ನಾವು ಸರ್ಕಾರ ನಡೆಸುತ್ತೇವೆ ಎಂದು ಹೊರಟಿರುವ ಕಾಂಗ್ರೆಸ್ಸಿಗರು ಜನರ ಬದುಕಿನೊಂದಿಗೆ ಚೆಲ್ಲಾಟವಾಡಲು ಹೊರಟಿದ್ದಾರೆ. ಇದನ್ನು ನೋಡಿಕೊಂಡು ಭಾರತೀಯ ಜನತಾ ಪಾರ್ಟಿ, ಕೈಕಟ್ಟಿ ಕೂರಲು ಸಾಧ್ಯವಿಲ್ಲ, ನಿಮ್ಮ ರೈತ ವಿರೋಧಿ, ಜನ ವಿರೋಧಿ, ಬಡವರ ವಿರೋಧಿ ಹಾಗೂ ಮಧ್ಯಮ ವರ್ಗಗಳ ವಿರೋಧಿ ಆಡಳಿತ ಕೊನೆಯಾಗುವ ವರೆಗೆ ನಾವೂ ಹೋರಾಟವನ್ನು ನಿಲ್ಲಿಸುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ವಿಜಯಕುಮಾರ ಪಾಟೀಲ ಮಾತನಾಡಿ, ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಅಭಿವೃದ್ಧಿ ಕೆಲಸ ಆಗಿಲ್ಲ. ಡೀಸೆಲ್ ದರ ಏರಿಕೆಯ ಹಿನ್ನೆಲೆಯಲ್ಲಿ ಕೇವಲ ವಾಹನ ಸವಾರರಿಗೆ ಮಾತ್ರ ಹೊರೆಯಾಗುವುದಿಲ್ಲ, ಇದು ಸರಕು




ಸಾಗಾಣಿಕೆಯ ಮೇಲೆ ಪರಿಣಾಮ ಬೀರಲಿದೆ, ಪ್ರಯಾಣದ ದರವನ್ನು ಹೆಚ್ಚಿಸಲಿದೆ, ತನ್ಮೂಲಕ ತರಕಾರಿಗಳ ಬೆಲೆ, ದಿನನಿತ್ಯ ಗೃಹಬಳಕೆ ವಸ್ತುಗಳ ಬೆಲೆ, ದವಸ ಧಾನ್ಯಗಳ ಬೆಲೆ, ಕಟ್ಟಡ ಸಾಮಗ್ರಿಗಳ ಬೆಲೆ ಹೆಚ್ಚಾಗಲಿದೆ, ಇದು ಇಡೀ ಕರುನಾಡ ಜನರನ್ನು ಸಂಕಷ್ಟಕ್ಕೆ ಸಿಲುಕಿಸುವ ಸರ್ವಾಧಿಕಾರಿ ನಿರ್ಧಾರವಾಗಿದೆ ಎಂದು ದೂರಿದರು.

ಈ ಸಂದರ್ಭದಲ್ಲಿ ಬೆಳಗಾವಿ ವಿಭಾಗದ ಪ್ರಭಾರಿಗಳಾದ ಚಂದ್ರಶೇಖರ ಕವಟಗಿ ಮಾತನಾಡಿ, ಪೆಟ್ರೋಲ್ ಬೆಲೆ ಲಿಟರ್ ಗೆ 3 ರೂ. ಖಿಸೇಲ್ ಬೆಲೆ 3.5 ರೂ ಹೆಚ್ಚಳದ ಅವಿವೇಕದ ಮತ್ತು ಜನವಿರೋಧಿ ನಿರ್ಧಾರವನ್ನು ಕಾಂಗ್ರೆಸ್ ಸಕಾರ ಕೈಗೊಂಡಿದೆ. ಬೆಲೆ ಏರಿಸಿದ ದರ ಹಿಂಪಡೆಯುವವರೆಗೂ ಬಿಜೆಪಿ ಹೋರಾಟ ನಿರಂತರವಾಗಿರುತ್ತದೆ ಎಂದರು.

ಈ ಸಂದರ್ಭದಲ್ಲಿ ನಗರದ ಮಂಡಲ ಅಧ್ಯಕ್ಷ ಶಂಕರ ಹೂಗಾರ ಮಾತನಾಡಿ, 18 ರಿಂದ 19 ಸ್ಥಾನ ಗೆಲ್ಲುವ ನಿರೀಕ್ಷೆಯನ್ನು ಕಾಂಗ್ರೆಸ್ ಮುಖಂಡರು ಇಟ್ಟುಕೊಂಡಿದ್ದರು, ಅವರು ಈಗ ಹತಾಶರಾಗಿದ್ದಾರೆ. ಹತಾಶರಾಗಿ ಬೆಲೆ ಏರಿಕೆಗೆ ಮುಂದಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಂಜುನಾಥ ಮೀಸೆ, ಇಂಡಿಯ ಕಾಸುಗೌಡ ಬಿರಾದಾರ, ಗುರಲಿಂಗಪ್ಪ ಅಂಗಡಿ, ಸ್ವಪ್ನಾ ಕಣಮುಚನಾಳ ಮಾತನಾಡಿದರು.

ಈ ಸಂದರ್ಭದಲ್ಲಿ ಜನತಾ ಪಾರ್ಟಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿ ಹಾಗೂ ಮಹಾನಗರ ಪಾಲಿಕೆ ಸದಸ್ಯ ಮಳುಗೌಡ ಪಾಟೀಲ, ಸಾಬು ಮಾಶ್ಯಾಳ, ಈರಣ್ಣ ರಾವುರ, ಪ್ರಭುಗೌಡ ಅಸ್ಕಿ, ಸಿದ್ದು ಬುಳ್ಳಾ, ಸುರೇಶ ಬಿರಾದಾರ, ಚಿದಾನಂದ ಚಲವಾದಿ, ಶ್ರೀನಿವಾಸ ಕಂದಗಲ, ಅನೀಲ ಉಪ್ಪಾರ, ಮಹೇಂದ್ರ ನಾಯಕ, ರಾಜಕುಮಾರ ಸಗಾಯಿ, ಗೂಳಪ್ಪ ಶಟಗಾರ, ಶರಣು ಕಾಖಂಡಕಿ, ಸಂತೋಷ ಪಾಟೀಲ ಡಂಬಳ, ರಾಕೇಶ ಕುಲಕರ್ಣಿ, ಮಲ್ಲಿಕಾರ್ಜುನ ಕಿವಡೆ, ವಿಜಯ ಜೋಶಿ, ಶಂಕರಗೌಡ ಪಾಟೀಲ, ಕಾಂತು ಶಿಂಧೆ, ಜಗದೀಶ ಮುಚ್ಚಂಡಿ, ಪಾಪುಸಿಂಗ ರಜಪೂತ, ವಿಕಾಸ ಪದಕಿ, ಶರಣಬಸು ಕುಂಬಾರ, ರಾಜೇಶ ತವಸೆ,ಆನಂದ ಮುಚ್ಚಂಡಿ, ಶಿವಾನಂದ ಮಕಣಾಪೂರ, ಗುರು ತಳವಾರ, ರಾಘು ಕಾಪ್ಸೆ, ಸೀತಲಕುಮಾರ ಓಗಿ, ಶೀಲವಂತ ಉಮರಾಣಿ, ಮಹಾನಗರ ಪಾಲಿಕೆ ಸದಸ್ಯರಾದ ಶಿವರುದ್ರ ಬಾಗಲಕೋಟ, ಕಿರಣ ಪಾಟೀಲ, ಪ್ರೇಮಾನಂದ ಬಿರಾದಾರ, ರಾಹುಲ ಜಾಧವ, ವಿಠ್ಠಲ ಹೊಸಪೇಟೆ, ಮಲ್ಲಿಕಾರ್ಜು ಗಡಗಿ, ಮಹೇಶ ಒಡೆಯರ ಮತ್ತು ಪ್ರವೀನ ಕೂಡಗಿ, ವಿಠ್ಠಲ ನಡುವಿನಕೇರಿ, ಪ್ರಕಾಶ ಚವ್ಹಾಣ, ದತ್ತಾ ಗೋಲಾಂಡೆ, ರಾಹುಲ ಆಪ್ಟೆ, ಪ್ರವೀಣ ವಂದಾಲಮಠ, ಸಂತೋಷ ಭೋವಿ, ಸಂತೋಷ ಕುರದಡ್ಡಿ, ವಿನೋದ ಪತ್ತಾರ, ಸಂಗಮೇಶ ಉಕ್ಕಲಿ, ಅನೀಲ ಉಪ್ಪಾರ, ಸಂತೋಷ ನಿಂಬರಗಿ, ಸುಚೇತಾ ಜಾಧವ, ಮಧು ಪಾಟೀಲ, ಸುವರ್ಣ ಕುರ್ಲೆ, ಈರಣ್ಣ ಶಿರಮಗೊಂಡ, ಆನಂದ, ರಾಚು ಬಿರಾದಾರ, ಈರಣ್ಣಾ ಬಿರಾದಾರ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಬಿ.ಎನ್.ಬಿ ಫೌಂಡೇಶನ್ ಕಾರ್ಯ ಶ್ಲಾಘನೀಯ :ಸಂಸದ ಜಿಗಜಿಣಗಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಬಿ.ಎನ್.ಬಿ ಫೌಂಡೇಶನ್ ಸಂಸ್ಥೆಯನ್ನು ಹುಟ್ಟು ಹಾಕಿದ ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ ಹಾಗೂ ಅವರ ಕುಟುಂಬ ಮುಂದಿನ ಯುವ ಪೀಳಿಗೆಗೆ ಸ್ಫೂರ್ತಿದಾಯಕವಾಗಿದ್ದಾರೆ ಎಂದು ವಿಜಯಪುರ ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಭಾನುವಾರದಂದು ಪಟ್ಟಣದ ಮಾಂಗಲ್ಯ ಭವನದಲ್ಲಿ ಬಿ.ಎನ್.ಬಿ ಫೌಂಡೇಶನ್ ವತಿಯಿಂದ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಕುಟುಂಬದಿಂದ ಬಂದಂತಹ ದಿ.ಭೀಮರಾಯಗೌಡರು ಈ ಸಮಾಜದಲ್ಲಿ ನೆನಪು ಉಳಿಯುವಂತಹ ಸಾಧನೆಗಳನ್ನು ಮಾಡಿ ಹೋಗಿದ್ದಾರೆ. ಸಾಧಕರಾಗಬೇಕಾದರೆ ದೃಢ–ಮನಸ್ಸು ಅಗತ್ಯ,ಜೀವನದ ಉತ್ತಮ ಆಲೋಚನೆಗಳು ಮಾತ್ರ ಉತ್ತಮ ಭವಿಷ್ಯದ ಬದುಕನ್ನು ನಿರ್ಧ–ರಿಸುತ್ತವೆ. ಇಂತಹ ಕಾರ್ಯಕ್ರಮಗಳು ಈ ಸಮಾಜದಲ್ಲಿ ಮೇಲಿಂದ ಮೇಲೆ ಜರುಗಬೇಕು. ವಿದ್ಯಾರ್ಥಿಗಳಲ್ಲಿ ಉತ್ತೇಜನ ನೀಡಬೇಕು. ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಿ ಅವರಿಗೆ ಪುರಸ್ಕರಿಸುವ ಬಿ.ಎನ್.ಬಿ ಫೌಂಡೇಶನ್ ಕಾರ್ಯ ಶ್ಲಾಘನೀಯ ಎಂದರು.




ಈ ವೇಳೆ ಮಾಜಿ ವಿಪ ಸದಸ್ಯ ಅರುಣ ಶಹಾಪುರ ಮಾತನಾಡಿ, ಈ ಹಿಂದೆ ರಾಜ್ಯದ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದ ಮಾಜಿ ಸಚಿವ, ಹಾಲಿ ಸಂಸದ ರಮೇಶ ಜಿಗಜಿಣಗಿ ಅವರು ಕರ್ನಾಟಕ ರಾಜ್ಯದಲ್ಲಿ ಮುರಾರ್ಜಿ ವಸತಿ ಶಾಲೆಯ ಕಲ್ಪನೆಯನ್ನು ತಂದಿದ್ದಕ್ಕೂ ಇಂದು ಸಾರ್ಥಕವಾಗಿದೆ. ಕಾರಣ ಸಾಧನೆ ಮಾಡಿ ಇಂದು ಈ ಕಾರ್ಯಕ್ರಮದಲ್ಲಿ ವಿಶೇಷ ಸನ್ಮಾನಗೊಳ್ಳಲಿರುವ ಅಂಕಿತಾ ಕೊಣ್ಣೂರ ಅಧ್ಯಯನ ಮಾಡಿದ್ದು ಮುರಾರ್ಜಿ ವಸತಿ ಶಾಲೆ.ಈ ಶಾಲೆ ಸಂಸದ ರಮೇಶ ಜಿಗಜಿಣಗಿ ಅವರ ಕಲ್ಪನೆ ಎಂಬುದು ಹೆಮ್ಮೆಯ ವಿಷಯ. ಬಡವರು, ದಿನ–ದಲಿತರು, ಗ್ರಾಮೀಣ ಭಾಗದ ಮಕ್ಕಳು ಶಿಕ್ಷಣವನ್ನು ಪಡೆದುಕೊಳ್ಳಬೇಕು ಎನ್ನುವ ನಿಟ್ಟಿನಲ್ಲಿ ಮುರಾರ್ಜಿ ವಸತಿ ಶಾಲೆಯ ಕಲ್ಪನೆ ತಂದಿದ್ದು ಇಂದು ಈ ವಿದ್ಯಾರ್ಥಿ ಸಾಧನೆ ಮಾಡುವ ಮೂಲಕ ಸಾರ್ಥಕಗೊಳಿಸಿದ್ದಾಳೆ ಎಂದರು.

ಈ ವೇಳೆ ಯಾದಗಿರಿಯ ಸಾಹಿತಿ ಶಿವಶರಣಪ್ಪ ಶಿರೂರ ಉಪನ್ಯಾಸ ನೀಡಿದರು. ವಿಜಯಪುರ ವನಶ್ರೀ ಮಠದ ಡಾ.ಜಯಬಸವ ಕುಮಾರ ಸ್ವಾಮಿಗಳು, ಯಂಕಂಚಿ ಶ್ರೀಮಠದ ಅಭಿನವ ರುದ್ರಮುನಿ ಶಿವಾಚಾರ್ಯರು, ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಮಹಾಸ್ವಾಮಿಗಳು, ಕನ್ನೊಳ್ಳಿ ಶ್ರೀಮಠದ ಸಿದ್ದಲಿಂಗ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಈ ವೇಳೆ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಅಂಕಿತಾ ಕೊಣ್ಣೂರ ಹಾಗೂ 25ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಸನ್ಮಾನಿಸುವುದರ ಜೊತೆಗೆ ಮಾಜಿ ಸೈನಿಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಫೌಂಡೇಶನ್ ಅಧ್ಯಕ್ಷ ಶ್ರೀಶೈಲಗೌಡ ಬಿರಾದಾರ ಸ್ವಾಗತಿಸಿದರು. ಸಿದ್ದಲಿಂಗ ಚೌದರಿ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ರಮೇಶ ಭೂಸನೂರ, ಡಾ.ಚನ್ನವೀರ ಮನಗೂಳಿ, ಗೋಲಗೇರಿಯ ಸಿದ್ದರಾಮ ಸ್ವಾಮೀಜಿ, ಮುಖಂಡ ಗುರಣ್ಣಗೌಡ ಬಿರಾದಾರ, ಸಿಪಿಐ ಪರಶುರಾಮ ಮನಗೂಳಿ, ಅಶೋಕ ವಾರದ, ಸಂತೋಷ ಪಾಟೀಲ್ ಡಂಬಳ, ಸಿದ್ದು ಬಳ್ಳಾ, ಸಿದ್ದನಗೌಡ ಬಿರಾದಾರ, ಬಸವರಾಜ ಬಿರಾದಾರ, ಭಗವಂತರಾಯಗೌಡ ಬಿರಾದಾರ, ಸೇವಾಲಾಲ ಸಿಂಗ್, ಮಡಿವಾಳಪ್ಪಗೌಡ ಬಿರಾದಾರ, ಮಲ್ಲನಗೌಡ ಬಿರಾದಾರ, ಡಾ.ವಿಶ್ವನಾಥ ಬಿರಾದಾರ್ ನಿಂಗನಗೌಡ ಬಿರಾದಾರ್ ಗೊಲ್ಲಾಳಪ್ಪಗೌಡ ಬಿರಾದಾರ ಸುರೇಶ ಮಳಲಿ, ಪೀರು ಕೆರೂರ, ಶ್ರೀಮಂತ ಪಾಟೀಲ ಕಾಶಿರಾಯಗೌಡ ಪಾಟೀಲ ಸೇರಿದಂತೆ, ದಿ.ಭೀಮರಾಯಗೌಡರ ಕುಟುಂಬಸ್ಥರು, ಅಭಿಮಾನಿಗಳು ಸಿಂದಗಿ, ಆಲಮೇಲ, ಮಾಗಣಗೇರಿ ಗ್ರಾಮಸ್ಥರು ಉಪಸ್ಥಿತರಿದ್ದರು.

# ಜೂ.21 331ನೆಯ ಸದ್ವಿಚಾರ ಗೋಷ್ಠಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಸಾರಂಗಮಠದ ಪೂಜ್ಯ ಶ್ರೀ ಚೆನ್ನವೀರ ಸ್ವಾಮೀಜಿ ಪ್ರತಿಷ್ಠಾನದ ವತಿಯಿಂದ ಜೂ.21 ಶುಕ್ರವಾರ ಸಾಯಂಕಾಲ 7ಗಂಟೆಗೆ ಕಾರ ಹುಣ್ಣಿಮೆಯ ದಿನದಂದು ಸಾರಂಗಮಠದ ಆವರಣದಲ್ಲಿ 331ನೆಯ ಸದ್ವಿಚಾರ ಗೋಷ್ಠಿ ಹಮ್ಮಿಕೊಳ್ಳಲಾಗಿದೆ ಎಂದು ಪ್ರತಿಷ್ಠಾನದ ಸಂಚಾಲಕರು ತಿಳಸಿದ್ದಾರೆ.

ಕಾರ್ಯಕ್ರಮದ ಪಾವನ ಸಾನಿಧ್ಯವನ್ನು ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ವಹಿಸಿಕೊಳ್ಳಲಿದ್ದಾರೆ. ಸಂಸ್ಥೆಯ ವಿದ್ಯಾರ್ಥಿಗಳಿಂದ ಕಾಡು ಬೆಳಸಿ ನಾಡು ಉಳಿಸಿ ಕುರಿತಾಗಿ ಭಾಷಣ ಮಾಡಿಸಲಾಗುವುದು. ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಅಂಗಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ನಿವೃತ್ತರಾದ ಆರ್.ಡಿ. ಪಾಟೀಲ ಕಾಲೇಜಿನ ನಿವೃತ್ತ ಪ್ರಾಚಾರ್ಯ ವಿ.ಡಿ.ಪಾಟೀಲ, ನಿವೃತ್ತ ಪ್ರಯೋಗಾಲಯ ಸಹಾಯಕ ಈರಣ್ಣ ಶಿವಸಿಂಪಿಗೇರ, ನಿವೃತ್ತ ಚಿತ್ರಕಲಾ ಶಿಕ್ಷಕ ಎಂ.ಬಿ.ಅಲ್ದಿ, ಶ್ರೀಕಾಂತ ಕುಂಬಾರ ಅವರಿಗೆ ಸನ್ಮಾನಿಸಿ ಗೌರವಿಸಲಾಗುವುದು. ಮಲ್ಲಯ್ಯ ಸಿದ್ರಾಮಯ್ಯ ನಂದಿಕೋಲ ಸಿಂದಗಿ ಪರಿವಾರದಿಂದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರಿಗೆ ನಾಣ್ಯ ತುಲಾಭಾರ ಸೇವೆ ನಡೆಯಲಿದೆ. ಕಾರಣ ಸಿಂದಗಿ ತಾಲೂಕಿನ ಸುತ್ತಮುತ್ತಲಿನ ಶ್ರೀಮಠದ ಭಕ್ತರು ಭಾಗವಹಿಸಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಸಂಚಾಲಕರು ತಿಳಸಿದ್ದಾರೆ.

# ರಾಜ್ಯ ಸರ್ಕಾರದಿಂದ ಜನರಿಗೆ ಬೆಲೆ ಏರಿಕೆ ಗ್ಯಾರಂಟಿ :ಜೋಶಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪೆಟ್ರೋಲ್ ಹಾಗೂ ಡಿಸೇಲ್ ಬೆಲೆ ಹೆಚ್ಚಳ ಮಾಡುವ ಮೂಲಕ ರಾಜ್ಯ ಸರ್ಕಾರ ಜನರಿಗೆ ಬೆಲೆ ಏರಿಕೆ ಗ್ಯಾರಂಟಿ ನೀಡಿದೆ ಎಂದು ಜಿಲ್ಲಾ ಬಿಜೆಪಿ ಮಾಧ್ಯಮ ಸಂಚಾಲಕ ವಿಜಯ ಜೋಶಿ ಟೀಕಿಸಿದ್ದಾರೆ.

ಈ ಕುರಿತು ಸೋಮವಾರ ಪ್ರಕಟಣೆ ನೀಡಿದ ಅವರು, ಜನರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡುವುದಾಗಿ ಭರವಸೆ ನೀಡಿದ ಕಾಂಗ್ರೆಸ್ ಅವರು ಜನರಿಗೆ ಬೆಲೆ ಏರಿಕೆಯ ಬರೆ ಎಳೆದಿದ್ದಾರೆ. ರಾಜ್ಯದಲ್ಲಿ ಒಂದು ವರ್ಷದಿಂದ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಜನ ವಿರೋಧಿ ಸರ್ಕಾರವಾಗಿದೆ. ಮನಸ್ಸೋ ಇಚ್ಛೆ ಪೆಟ್ರೋಲ್ ಡಿಸೇಲ್ ಏರಿಕೆ ಮಾಡುವ ಮೂಲಕ ನಿತ್ಯದ ಜೀವನ ಸಾಗಿಸಲು ಒದ್ದಾಡುವಂತೆ ಮಾಡಿದೆ. ಕೂಡಲೇ ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆಯನ್ನು ಇಳಿಕೆ ಮಾಡಬೇಕೆಂದು ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.



# ನಿಗದಿತ ಅವಧಿಯಲ್ಲಿ ಹಣ ಸಂದಾಯವಾಗದಿದ್ದಲ್ಲಿ ಸಕ್ಕರೆ ಕಾರ್ಖಾನೆ ಹರಾಜಿಗೆ ಕ್ರಮ :ಡಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕಬ್ಬು ಪೂರೈಕೆ ಮಾಡಿದ ರೈತರಿಗೆ ಬಾಕಿ ಹಣ ಸಂದಾಯ ಮಾಡದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಬಸವೇಶ್ವರ ಶುಗರ್ಸ್ ಸಕ್ಕರೆ ಕಾರ್ಖಾನೆ ಹರಾ–ಜಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.



ಬಬಲೇಶ್ವರ ತಾಲೂಕಿನ ಕಾರಜೋಳ ಗ್ರಾಮದಲ್ಲಿರುವ ಶ್ರೀ ಬಸವೇಶ್ವರ ಶುಗರ್ಸ್ ಸಕ್ಕರೆ ಕಾರ್ಖಾನೆಯವರು 2023–24ನೇ ಸಾಲಿನ ಕಬ್ಬು ನುರಿಸುವ ಹಂಗಾಮಿಗೆ ಸಂಬಂಧಿಸಿದಂತೆ ರೈತ–ರಿಗೆ ನೀಡಬೇಕಾಗಿರುವ ಬಾಕಿ ಹಣ ರೂ.68.44 ಕೋಟಿಗಳನ್ನು ನಿಗದಿತ ಅವಧಿಯಲ್ಲಿ ಪಾವತಿಸದೇ ಇರುವ ಕಾರಣದಿಂದ ಸಕ್ಕರೆ (ನಿಯಂತ್ರಣ) ಆದೇಶ ಹಾಗೂ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಅಡಿಯಲ್ಲಿ ಸದರಿ ಸಕ್ಕರೆ ಕಾರ್ಖಾನೆಯವರಿಂದ ಭೂಬಾಕಿ ರೂಪದಲ್ಲಿ ಬಡ್ಡಿ ಸಮೇತ ವಸೂಲಾತಿ ಮಾಡಲು ಜಿಲ್ಲಾಧಿಕಾ–ರಿಗಳ ವರದಿ ಮೇರೆಗೆ ಆಯುಕ್ತರು, ಕಬ್ಬು ಅಭಿವೃದ್ದಿ ಹಾಗೂ ಸಕ್ಕರೆ ನಿರ್ದೇಶಕರು ಬೆಂಗಳೂರು ಇವರು ಆದೇಶ ಹೊರಡಿಸಿದ್ದಾರೆ.

ರೈತರಿಗೆ ನೀಡಬೇಕಾದ ಬಾಕಿ ಹಣ ರೂ. 70.80 ಕೋಟಿ (ಬಡ್ಡಿ ಸೇರಿ) ಗಳನ್ನು ಪಾವತಿಸಲು ಕಾಲಾವಕಾಶ ನೀಡಿ ನೋಟಿಸ್ ನೀಡಲಾಗಿದ್ದರೂ ಸಹ ಸದರಿ ಕಾರ್ಖಾನೆಯವರು ಸ್ಪಂದಿಸದೇ ಇರುವುದರಿಂದ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಮೇರೆಗೆ ಬಬಲೇಶ್ವರ ತಾಲೂಕಿನ ಕಾರಜೋಳ ಗ್ರಾಮದಲ್ಲಿರುವ ಶ್ರೀ ಬಸವೇಶ್ವರ ಶುಗರ್ಸ್ ಸಕ್ಕರೆ ಕಾರ್ಖಾನೆಯ ಆಸ್ತಿಗಳ ಭೂ ದಾಖಲೆಗಳಲ್ಲಿ ರೂ.70.80 ಕೋಟಿ ಹಣವನ್ನು ಬೋಜಾ ದಾಖಲು ಮಾಡಿ ಗೇಣಿ ಮತ್ತು ಪಹಣಿ ಪತ್ರಿಕೆಗಳನ್ನು ಕಚೇರಿ ಸಲ್ಲಿಸುವಂತೆ ಬಬಲೇಶ್ವರ ತಹಶೀಲ್ದಾರರಿಗೆ ಈಗಾಗಲೇ ಜಿಲ್ಲಾಧಿಕಾರಿಗಳು ಆದ–ೇಶಿಸಿದ್ದಾರೆ.

ನಿಗದಿತ ಅವಧಿಯಲ್ಲಿ ಹಣವನ್ನು ಪಾವತಿಸದೇ ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರನ್ವಯ ಸಕ್ಕರೆ ಕಾರ್ಖಾನೆಯನ್ನು ಹರಾಜು ಮಾಡಲು ಕ್ರಮ ವಹಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸದ್ಯಕ್ಕೆ ರಾಜ್ಯದಲ್ಲಿ ಬಸ್ ಟಿಕೆಟ್ ದರ ಹೆಚ್ಚಳ ಮಾಡಲ್ಲ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಇಂಧನ ದರ ಏರಿಕೆ ಬೆನ್ನಲ್ಲೇ ಸರ್ಕಾರಿ ಬಸ್ ಟಿಕೆಟ್ ದರ ಹೆಚ್ಚಳ ಮಾಡಲಾಗುತ್ತದೆ ಎಂದ ಹೇಳಲಾಗುತ್ತಿತ್ತು. ಆದರೆ ಇದೀಗ ರಾಜ್ಯದಲ್ಲಿ ಸದ್ಯಕ್ಕೆ ಸರ್ಕಾರಿ ಬಸ್ ಟಿಕೆಟ್ ದರ ಹೆಚ್ಚಳ ಮಾಡಲ್ಲ. ಇಲಾಖೆಯೊಂದಿಗೆ ಚರ್ಚೆ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಗ್ಯಾರಂಟಿ ಯೋಜನೆಗಳಿಗೆ ಹಣ ನೀಡಲು ತೈಲ ಬೆಲೆ ಏರಿಕೆ ಮಾಡಿಲ್ಲ. ಬದಲಿಗೆ, ಆರ್ಥಿಕ ಮೂಲಗಳಾದ ಮದ್ಯ ಮತ್ತು ತೈಲದಿಂದ ಹೆಚ್ಚಿನ ಆದಾಯ ಬಂದರೆ, ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತದೆ ಅಂತ ತೈಲ ಬೆಲೆ ಏರಿಕೆ ಮಾಡಿದ್ದೇವೆ ಎಂದು ಹೇಳಿದರು.

ಪೆಟ್ರೋಲ್ ಹಾಗೂ ಡಿಸೇಲ್ ಮೇಲೆ ರೂ.3 ಹೆಚ್ಚಳ ಮಾಡಲಾಗಿದೆ. ಆದರೆ, ಬಿಜೆಪಿ ಸರ್ಕಾರ ಆಡಳಿತ ಇರುವ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ತೈಲ ಬೆಲೆ ಕಡಿಮೆ ಇದೆ. ನಮ್ಮ ಅಕ್ಕ–ಪಕ್ಕದ ರಾಜ್ಯದಲ್ಲಿ ತೈಲ ಬೆಲೆ ಹೆಚ್ಚಿದೆ, ನಮ್ಮಲ್ಲಿ ಅಲ್ಲಿಗಿಂತ ದರ ಕಡಿಮೆ ಇದೆ. ಬಿಜೆಪಿ ಆಡಳಿತ ಇರುವ ಮಹಾರಾಷ್ಟ್ರ, ರಾಜಸ್ಥಾನ ಮತ್ತು ಗುಜರಾತ್ ರಾಜ್ಯಗಳಲ್ಲಿ ತೈಲ ಬೆಲೆ ಇಲ್ಲಿಗಿಂತ ಅಧಿಕವಾಗಿದೆ. ಆದರೂ, ಬಿಜೆಪಿ ನಾಯಕರು ಇಲ್ಲಿ ಪ್ರತಿಭಟನೆ ಮಾಡುತ್ತಿದ್ದಾರೆ. ನಮ್ಮ ವಿರುದ್ಧದ ಬದಲು ಬಿಜೆಪಿಯವರು ಕೇಂದ್ರದ ವಿರುದ್ಧ ಧರಣಿ ಮಾಡಬೇಕು ಎಂದು ತಿಳಿಸಿದರು.

ಈ ಹಿಂದೆ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಇದ್ದಾಗ ಗ್ಯಾಸ್, ತೈಲ ದರ ಹೆಚ್ಚಿಸಿದ ಸಮಯದಲ್ಲಿ ಅಂದು ಗುಜರಾತ್ ಮುಖ್ಯಮಂತ್ರಿಯಾಗಿದ್ದ ನರೇಂದ್ರ ಮೋದಿಯವರು ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಆಡಳಿತಕ್ಕೆ ಬಂದರೆ ಇವೆಲ್ಲದರ ಬೆಲೆ ಇಳಿಸುತ್ತೇವೆ ಎಂದು ಹೇಳಿದ್ದರು. ಆದರೆ, ಇದೀಗ ಪ್ರಧಾನಿ ಮೋದಿ ತದ್ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದರು.

ಮೋದಿಯವರು ಪ್ರಧಾನಿಯಾದ ಸಂದರ್ಭದಲ್ಲಿ ಪೆಟ್ರೋಲ್ ದರ 72.26 ರೂ. ಇತ್ತು. ಆದರೆ ಈಗ 104 ರೂ. ಆಗಿದೆ. ಡೀಸೆಲ್ ಬೆಲೆ 67.28 ಇತ್ತು, ಇದೀಗ 91 ರೂ. ಆಗಿದೆ. ಈಗ ಕ್ರೂಡ್ ಆಯಿಲ್ ಬೆಲೆ 84 ರೂಪಾಯಿ ಇದೆ. 2015ರಲ್ಲಿ ಕಚ್ಚಾ ತೈಲ ದರ 50 ರೂ. ಇತ್ತು. ಹಾಗಾದರೆ ಯಾರ ವಿರುದ್ಧ ನೀವು ಪ್ರತಿಭಟನೆ ಮಾಡಬೇಕು ಎಂದು ರಾಜ್ಯ ಬಿಜೆಪಿ ನಾಯಕರನ್ನು ಪ್ರಶ್ನಿಸಿದರು.

ಬಿಜೆಪಿಯುವರಿಗೆ ಬಡವರು, ಜನಸಾಮಾನ್ಯರ ಬಗ್ಗೆ ಕಾಳಜಿ ಇದ್ದರೆ ಬೆಲೆ ಕಡಿಮೆ ಮಾಡಬೇಕಿತ್ತು. ಕೇಂದ್ರ ಸರ್ಕಾರ ಜಿಎಸ್‌ಟಿ ತಂದ ಮೇಲೆ ರಾಜ್ಯ ಸರ್ಕಾರಕ್ಕೆ ಬರುವ ತೆರಿಗೆ ಪಾಲು ಕಡಿಮೆ ಆಯಿತು. ಸ್ಟ್ಯಾಂಪ್ ಡ್ಯೂಟಿ, ಮೋಟರ್ ತೆರಿಗೆ ಬಿಟ್ಟು ಎಲ್ಲದರ ಕುರಿತು ಕೇಂದ್ರ ಸರ್ಕಾರ ನಿರ್ಧಾರ ಮಾಡುತ್ತದೆ. ಕರ್ನಾಟಕಕ್ಕೆ 18,6000 ಕೋಟಿ ರೂ. ನಷ್ಟವಾಗಿದೆ. ಕರ್ನಾಟಕಕ್ಕೆ ಬರುವ ತರಿಗೆ ಕಡಿಮೆಯಾದರೂ, ರಾಜ್ಯದ ಪರ ಬಿಜೆಪಿಯವರು ಒಂದು ದಿನವೂ ಮಾತನಾಡಿಲ್ಲ ಎಂದರು.

ರಿಂಗ್ ರೋಡ್ ನಿರ್ಮಾಣ–ಕ್ಕೆ ಹಾಗೂ ಕೆರೆ ಅಭಿವೃದ್ಧಿ, ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ಬಿಜೆಪಿಯವರು ಮಾತನಾಡುತ್ತಿಲ್ಲ. ಇದಷ್ಟೆ ಅಲ್ಲದೇ ಯಾವುದರ ಬಗ್ಗೆಯೂ ಬಿಜೆಪಿಯವರು ಮಾತನಾಡಿಲ್ಲ. ಈಗ ನಮ್ಮ ಸರ್ಕಾರಕ್ಕೆ ಪಾಪರ್ ಆಗಿದೆ ಎಂದು ಹೇಳುತ್ತಿದ್ದಾರೆ. ನಾವೇನು ನೌಕರ ಸಂಬಳ ನಿಲ್ಲಿಸಿದ್ದೇವಾ? ಬಡವರು, ರೈತರು ಬಗ್ಗೆ ಬಿಜೆಪಿವರಿಗೆ ಕಾಳಜಿ ಇದೆಯಾ? ಎಂದು ಪ್ರಶ್ನಿಸಿದರು.

# ಬಕ್ರೀದ್: ಮುಸ್ಲಿಂ ಬಾಂಧವರ ಸಾಮೂಹಿಕ ಪ್ರಾರ್ಥನೆ

**ಉದಯರಶ್ಮಿ ನ್ಯೂಸ್**

ಮೋರಟಗಿ: ಮನುಷ್ಯನ ಜನನ ಆಕಸ್ಮಿಕ, ಮರಣ ನಿಶ್ಚಿತ, ಜನನ–ಮರಣಗಳ ಮಧ್ಯೆದಲ್ಲಿ ಸರ್ವ ಸಮುದಾಯ ಭಾಂದವರ ಜೊತೆಗೆ ಅವಿನಾಭಾವದ ಜೀವನ ಕಳೆಯಬೇಕು ಎಂದು ಅಂಜುಮನ್ ಸಮಿತಿ ಕಾರ್ಯದರ್ಶಿ ಮೈಬೂಬಸಾಬ ಕಣ್ಣಿ ಹೇಳಿದರು.



ಗ್ರಾಮದ ಇದ್ಗಾ ಮೈದಾನದ ಆವರಣದಲ್ಲಿ ಬಕ್ರೀದ್ ಹಬ್ಬದ ಪ್ರಯುಕ್ತ ಮುಸ್ಲಿಂ ಭಾಂದವರು ಹಮ್ಮಿಕೊಂಡ ಸಾಮೂಹಿಕವಾಗಿ ಪ್ರಾರ್ಥನೆಯಲ್ಲಿ ಮಾತನಾಡಿದ ಅವರು, ಇಂದಿನ ರಾಜಕೀಯ ರಂಗ ಹದಗೆಟ್ಟಿದ್ದು, ತಮ್ಮ ರಾಜಕೀಯ ಬೇಳೆ ಬೆಯಿಸಿಕೊಳ್ಳಲು ಜಾತಿ ಜಾತಿಗಳ ಮಧ್ಯದಲ್ಲಿ ವೀಷದ ಬೀಜ ಬಿತ್ತುತ್ತಾರೆ. ರಾಜಕೀಯವನ್ನು ಬದಿಗೊತ್ತಿ ವ್ಯಾಪಾರ ವಹಿವಾಟದಲ್ಲಿ ಮುಂದೆ ಬರಬೇಕು. ತಮ್ಮ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಬೇಕು ನಿರ್ಗತಿಕರು ಕಂಡಲ್ಲಿ ಸಹಾಯಕ್ಕೆ ಮುಂದಾಗಬೇಕು ಎಂದು ಸಮುದಾಯದ ಯುವಕರಿಗೆ ಸಲಹೆ ನೀಡಿದರು.

ಸೋಮವಾರ ಬೆಳಿಗ್ಗೆ 8ಗಂಟೆಗೆ ಪ್ರಾರ್ಥನೆ ಸಲ್ಲಿಸಿ ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹಿಂದೂ ಸಮುದಾಯದ ಹಿರಿಯರಿಗೆ ಮತ್ತು ಯುವಕರಿಗೆ ಭೇಟಿ ನೀಡಿ ಇದ್–ಮಿಲಾದ ಮಾಡಿದರು. ಮನೆಗೆ ಆಮಂತ್ರಿಸಿ ಸುರಕುಂಬ್ ಕುಡಿಸಿ ಸಂಭ್ರಮಿಸಿದರು.

ಈ ವೇಳೆ ಶಾಹಾಬಾದ ಮೌಲಾನ ಪ್ರಾರ್ಥನೆಯಲ್ಲಿ ಮಂತ್ರ ಪಠಣ ಮಾಡಿದರು. ಅಬ್ಬಾಸಲಿ ಬಂಟನೂರ, ರಜಾಕ ಬಾಗವಾನ, ಗಫೂರ ಮುಲ್ಲಾ, ಸಲೀಮ್ ಕಣ್ಣಿ, ಎಂ.ಕೆ.ಮುಲ್ಲಾ, ಸಿರಾಜ್ ಕಣ್ಣಿ, ಶಬ್ಬೀರ ಬಾಸಗಿ, ಮಾಬಣ್ಣ ಗೊಗಾಡಿ, ಸೇರಿದಂತೆ ಇಸ್ಲಾಂ ಬಾಂಧವರು ಉಪಸ್ಥಿತರಿದ್ದರು

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR